ಸಂಪುಟ : 10 ಸಂಚಿಕೆ: 135 ಪುಟ : 4+2 ಬೆಲೆ: 3.00 ಮಂಗಳವಾರ ಜುಲೈ 01 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 135 Pages : 4+2 Price : 3.00 Tuesday July 01 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಸಚಿವ ಎಚ್ ಕೆ ಪಾಟೀಲರಿಗೆ ಮತ್ತೊಂದು ಜವಬ್ದಾರಿ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ಕರ್ನಾಟಕ ಗಡಿ ಹಾಗೂ ನದಿಗಳಿಗೆ ಸಂಬಂಧಿಸಿದ ವಿವಾದಗಳ ಬಗ್ಗೆ ನಿರಂತರ ನಿಗಾ ಇಡಲು ಕಾನೂನು, ನ್ಯಾಯ ಶಾಸನ ರಚನೆ ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಪ್ರವಾಸೋದ್ಯಮ ಇಲಾಖೆಯ ಸಚಿವ ಎಚ್ ಕೆ ಪಾಟೀಲರಿಗೆ ಜವಬ್ದಾರಿ ವಹಿಸಿ ರಾಜ್ಯ ಸರ್ಕಾರ ಮಹತ್ವದ ನಿರ್ಧಾರ ಕೈಗೊಂಡಿದೆ.

ಈ ಕುರಿತು ಸೋಮವಾರ ಸಂಜೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ (ರಾಜಕೀಯ) ಸರಕಾರದ ಆದೀನ ಕಾರ್ಯದರ್ಶಿ ಸಂದೀಪ್ ಬಿ ಕೆ ಅವರು ಆದೇಶ ಹೊರಡಿಸಿದ್ದಾರೆ.

ಹಿರಿಯ ಸಚಿವ ಎಚ್ ಕೆ ಪಾಟೀಲರ ಈ ನೇಮಕದಿಂದಾಗಿ ಕರ್ನಾಟಕದ ಗಡಿ ನದಿಗಳಿಗೆ ಸಂಬಂಧಿಸಿದ ವಿವಾದಗಳ ಬಗ್ಗೆ ನಿರಂತರವಾಗಿ ನಿಗಾ ವಹಿಸಿ ಕಾನೂನಾತ್ಮಕವಾಗಿ ಮತ್ತು ರಾಜಕೀಯ ನೆಲೆಗಟ್ಟಿನಲ್ಲಿ ಪರಿಶೀಲಿಸಿ ಸಮಯೋಚಿತ ಅವಶ್ಯಕ ಕ್ರಮ ತೆಗೆದುಕೊಳ್ಳಲು ಸರಕಾರಕ್ಕೆ ಇದರಿಂದ ಸಹಾಯವಾಗಲಿದೆ.

## ನಾಳೆಯಿಂದ ಸರ್ಕಾರದ ಸಾಧನೆ ಬಿಂಬಿಸುವ ವಸ್ತು ಪ್ರದರ್ಶನ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ 2 ವರ್ಷಗಳ ಸಾಧನೆಯನ್ನು ಮತ್ತು ಸರ್ಕಾರದ ಯೋಜನೆಗಳನ್ನು ಬಿಂಬಿಸುವ ವಸ್ತು ಪ್ರದರ್ಶನವನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಗದಗ ಜಿಲ್ಲೆಯ ಕೇಂದ್ರ ಬಸ್ ನಿಲ್ದಾಣದಲ್ಲಿ ಜುಲೈ 2 ರಿಂದ 4 ರವರೆಗೆ ಹಮ್ಮಿಕೊಳ್ಳಲಾಗಿದೆ.

ಜುಲೈ 2 ರಂದು ಬೆಳಿಗ್ಗೆ 10.30 ಗಂಟೆಗೆ ವಸ್ತುಪ್ರದರ್ಶನದ ಉದ್ಘಾಟನೆ ಜರುಗಲಿದೆ. ಉದ್ಘಾಟನೆ ಕಾರ್ಯಕ್ರಮದಲ್ಲಿ ಜನಪ್ರತಿನಿಧಿಗಳು, ಗಣ್ಯರು, ವಿವಿಧ ಇಲಾಖೆ ಅಧಿಕಾರಿಗಳು ಆಗಮಿಸಲಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವ ಮೂಲಕ ಈ ಪ್ರದರ್ಶನದ ಸದುಪಯೋಗ ಪಡೆದುಕೊಳ್ಳಬೇಕೆಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮುಖ್ಯಮಂತ್ರಿ ಬದಲಾವಣೆ ಹೈಕಮಾಂಡ್ ನಿರ್ಧಾರ: ಮಲ್ಲಿಕಾರ್ಜುನ ಖರ್ಗೆ ಸ್ಪಷ್ಟನೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕದಲ್ಲಿ ಮುಖ್ಯಮಂತ್ರಿ ಬದಲಾವಣೆಯ ಬಗ್ಗೆ ಕಾಂಗ್ರೆಸ್ ನಾಯಕರು ಬಹಿರಂಗವಾಗಿ ಚರ್ಚಿಸುತ್ತಿರುವುದಕ್ಕೆ ಪ್ರತಿಕ್ರಿಯಿಸಿದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಇಂತಹ ನಿರ್ಧಾರಗಳನ್ನು ಪಕ್ಷದ ಹೈಕಮಾಂಡ್ ತೆಗೆದುಕೊಳ್ಳುತ್ತದೆ ಎಂದು ಸೋಮವಾರ ಹೇಳಿದ್ದಾರೆ. ಯಾರೂ ಅನಗತ್ಯ ಸಮಸ್ಯೆಗಳನ್ನು ಸೃಷ್ಟಿಸಬಾರದು ಎಂದು ಅವರು ಇದೇ ವೇಳೆ ಎಚ್ಚರಿಸಿದರು.

ರಾಜ್ಯದ ಕೆಲವು ಕಾಂಗ್ರೆಸ್ ನಾಯಕರು ಅಕ್ಟೋಬರ್‌ನಲ್ಲಿ ಮುಖ್ಯಮಂತ್ರಿ ಹುದ್ದೆಯಲ್ಲಿ ಬದಲಾವಣೆ ಆಗಬಹುದು ಎಂದು ಹೇಳಿಕೆ ನೀಡಿದ ಕುರಿತು ಮಾಧ್ಯಮದವರು ಕೇಳಿದ ಪ್ರಶ್ನೆಗಳಿಗೆ ಖರ್ಗೆ ಉತ್ತರಿಸಿದರು.

### ರಾಜ್ಯ ಸರ್ಕಾರದ ಭ್ರಷ್ಟಾಚಾರ ಖಂಡಿಸಿ ಜೆಡಿಎಸ್‌ನಿಂದ ಪ್ರತಿಭಟನೆ, ರಾಜ್ಯಪಾಲರಿಗೆ ಮನವಿ

# ಕಾಂಗ್ರೆಸ್ ಸಂವಿಧಾನಬದ್ಧ ಆಡಳಿತ ನಡೆಸಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಭ್ರಷ್ಟಾಚಾರದಲ್ಲಿ ಮುಳುಗಿದೆ ಎಂದು ಆರೋಪಿಸಿ ಜೆಡಿಎಸ್ ರಾಜ್ಯ ವಕ್ತಾರ ವಿ.ಆರ್. ಗೋವಿಂದಗೌಡ್ರ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ ನಡೆಸಿ, ನಗರದ ಗಾಂಧಿ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ, ಕಾಲ್ನಡಿಗೆಯಲ್ಲಿ ತಹಸೀಲ್ದಾರ ಕಚೇರಿಗೆ ತೆರಳಿ, ತಹಸೀಲ್ದಾರರ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಿದರು.

ಈ ವೇಳೆ ಮಾತನಾಡಿದ ವಿ.ಆರ್. ಗೋವಿಂದಗೌಡ್ರ, ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರವು ಕಳೆದ 2 ವರ್ಷಗಳಿಂದ ಜನರಿಗೆ ಉತ್ತಮ ಮತ್ತು ಕ್ರಿಯಾಶೀಲ ಆಡಳಿತ ನೀಡುವಲ್ಲಿ ಸಂಪೂರ್ಣವಾಗಿ ವಿಫಲವಾಗಿದೆ. ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ಲಂಚಗುಳಿತನ, ಭ್ರಷ್ಟಾಚಾರ ಹೆಚ್ಚುತ್ತಿದ್ದು, ಸ್ವಜನಪಕ್ಷಪಾತ ತುಂಬಿ ತುಳುಕುತ್ತಿದೆ. ಈ ಬಗ್ಗೆ ರಾಜ್ಯ ಕಾಂಗ್ರೆಸ್ ಪಕ್ಷದ ಹಿರಿಯ ಶಾಸಕರು ಮತ್ತು ಮುಖಂಡರುಗಳೇ ರಾಜ್ಯ ಸರ್ಕಾರದ ಮತ್ತು ಸಚಿವರುಗಳ ವಿರುದ್ಧ ಬಹಿರಂಗವಾಗಿ ದಾಖಲೆಗಳೊಂದಿಗೆ ಮಾಧ್ಯಮಗಳಲ್ಲಿ ಆರೋಪಿಸಿದ್ದಾರೆ ಎಂದರು.

ವಸತಿ ಇಲಾಖೆಯು ರಾಜ್ಯದಲ್ಲಿನ ಅತ್ಯಂತ ಹಿಂದುಳಿದ, ಬಡತನದ ಕುಟುಂಬಗಳ ನಿವೇಶನ ಹಾಗೂ ವಸತಿ



ರಹಿತ ನೈಜ ಫಲಾನುಭವಿಗಳಿಗೆ ಮೀಸಲಾಗಿರುವ ವಸತಿ ಯೋಜನೆಗಳನ್ನು ಲಂಚ ನೀಡುವವರಿಗೆ ಮಾತ್ರ ನೀಡುತ್ತಿದ್ದು, ಇಲಾಖೆಯು ವ್ಯಾಪಕ ಭ್ರಷ್ಟಾಚಾರದಲ್ಲಿ ತೊಡಗಿರುವುದಾಗಿ ಈಗಾಗಲೇ ಪತ್ರಿಕಾ ಮತ್ತು ದೃಶ್ಯಮಾಧ್ಯಮಗಳು ಸಾಕಷ್ಟು ವರದಿ ಮಾಡಿವೆ. ಇದಲ್ಲದೆ ರಾಜ್ಯ ಸರ್ಕಾರ ಇದುವರೆಗೂ ರಾಜ್ಯದ ಜನತೆಗೆ ಮೂಲಭೂತ ಸೌಕರ್ಯಗಳಾದ ರಸ್ತೆ, ಸೇತುವೆ, ಕೆರೆ-ಕಟ್ಟೆಗಳ ಪುನಶ್ಚೇತನ, ಒಳಚರಂಡಿ, ಕುಡಿಯುವ ನೀರಿನ ವ್ಯವಸ್ಥೆ ಮುಂತಾದವುಗಳನ್ನು ಒದಗಿಸುವಲ್ಲಿ ಸಂಪೂರ್ಣವಾಗಿ ವಿಫಲವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ರಾಜೀವ್‌ಗಾಂಧಿ ವಸತಿ ನಿಗಮದ ವತಿಯಿಂದ ಫಲಾನುಭವಿಗಳಿಗೆ ಮನೆಗಳ ಹಂಚಿಕೆಯಲ್ಲಿ ವ್ಯಾಪಕವಾದ ಭ್ರಷ್ಟಾಚಾರ ನಡೆದಿರುವುದಾಗಿ ಕಾಂಗ್ರೆಸ್ ಪಕ್ಷದ ಹಿರಿಯ ಶಾಸಕರೇ ನೇರವಾಗಿ ವಸತಿ ಸಚಿವ ಜಮೀರ್ ಅಹಮದ್ ವಿರುದ್ಧ ಅಪಾದನೆ ಮಾಡಿದ್ದಾರೆ ಎಂದರು. ಕಾಂಗ್ರೆಸ್ ಪಕ್ಷದ ಹಿರಿಯ ಶಾಸಕರು, ರಾಜ್ಯ ಸರ್ಕಾರ ಕಳೆದ 2 ವರ್ಷಗಳಿಂದ ಯಾವುದೇ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳದೆ ಜನರನ್ನು ವಂಚಿಸುತ್ತಿರುವುದಾಗಿ ಆರೋಪಿಸಿದ್ದಾರೆ. ಈ ಹಿನ್ನಲೆಯಲ್ಲಿ ಭ್ರಷ್ಟಾಚಾರ ಹೊತ್ತಿರುವ ಜಮೀರ್ ಅಹಮದ್ ಅವರನ್ನು ಸಚಿವ ಸಂಪುಟದಿಂದ ವಜಾಗೊಳಿಸಬೇಕೆಂದು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

> ಗುತ್ತಿಗೆದಾರರ ಬಾಕಿ ಹಣ ಪಾವತಿ ಮಾಡುವಲ್ಲಿಯೂ ಸಹ ವಿಳಂಬ ಮಾಡುತ್ತಾ ಬಂದಿದ್ದು, ಬಡವರ ಹಾಗೂ ರೈತ ವಿರೋಧಿ ಸರ್ಕಾರವಾಗಿ ಮಾರ್ಪಟ್ಟಿದೆ. ಪರಿಶಿಷ್ಟರಿಗೆ ಮೀಸಲಾಗಿರುವ ಹಣದಲ್ಲಿಯೂ ತಾರತಮ್ಯವೆಸಗುತ್ತಿದ್ದು, ಆ ವರ್ಗದ ಜನರಿಗೆ ಅನ್ಯಾಯ ಮಾಡುತ್ತಿದೆ. ಕೇವಲ ತುಷ್ಟೀಕರಣ ರಾಜಕಾರಣ ಮಾಡುತ್ತ ರಾಜ್ಯದ ಜನರಿಗೆ ಘೋರ ಅನ್ಯಾಯವೆಸಗಿದೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಅತೀವ ಭ್ರಷ್ಟಾಚಾರ, ಆಡಳಿತ ವೈಫಲ್ಯದಲ್ಲಿ ತೊಡಗಿರುವ ರಾಜ್ಯ ಕಾಂಗ್ರೆಸ್ ಸರ್ಕಾರವನ್ನು ರಾಜ್ಯಪಾಲರು ತರಾಟೆಗೆ ತೆಗೆದುಕೊಂಡು ಸೂಕ್ತ ರೀತಿಯಲ್ಲಿ ಸಂವಿಧಾನಬದ್ಧವಾಗಿ ಆಡಳಿತ ನಡೆಸಲು ನಿರ್ದೇಶನ ನೀಡಬೇಕು. ಇಲ್ಲದಿದ್ದರೆ ಮುಂದಿನ ದಿನಮಾನಗಳಲ್ಲಿ ರಾಜ್ಯಾದ್ಯಂತ ಜೆಡಿಎಸ್‌ನಿಂದ ಉಗ್ರ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಜೆಡಿಎಸ್ ಕಾರ್ಯಕರ್ತರು ಉಪಸ್ಥಿತರಿದ್ದರು.

### ಕ್ರಿಯಾಯೋಜನೆ ರದ್ದುಪಡಿಸಲು ಆಗ್ರಹಿಸಿ ಬಿಜೆಪಿ ಸದಸ್ಯರಿಂದ ಜಿಲ್ಲಾಧಿಕಾರಿಗಳಿಗೆ ಮನವಿ

# ಅನುದಾನವನ್ನು ಎಲ್ಲ ವಾರ್ಡ್‌ಗಳಿಗೂ ಹಂಚಿಕೆ ಮಾಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಪಟ್ಟಣದ ಅಭಿವೃದ್ಧಿಗಾಗಿ ಸರ್ಕಾರದಿಂದ ಬಿಡುಗಡೆ ಆಗಿರುವ ಅನುದಾನವನ್ನು ಎಲ್ಲ 23 ವಾರ್ಡ್‌ಗಳಿಗೆ ನೀಡುವ ಬದಲು ಅಧ್ಯಕ್ಷರು ಹಾಗೂ ಕಾಂಗ್ರೆಸ್ ಪಕ್ಷದ ಸದಸ್ಯರು ತಮಗೆ ಬೇಕಾದ ವಾರ್ಡ್‌ಗಳಿಗೆ ಹಾಕಿಕೊಂಡಿದ್ದಾರೆ. ಕಾರಣ, ಅನುದಾನವನ್ನು ಎಲ್ಲ ವಾರ್ಡ್‌ಗಳಿಗೂ ಹಂಚಿಕೆ ಮಾಡಬೇಕು ಎಂದು ಒತ್ತಾಯಿಸಿ ಸೋಮವಾರ ಲಕ್ಷ್ಮೇಶ್ವರ ಪುರಸಭೆಯ ಬಿಜೆಪಿ ಸದಸ್ಯರು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ ಆಗ್ರಹಿಸಿದರು.

ಈ ಸಂದರ್ಭದಲ್ಲಿ ಪುರಸಭೆ ಸದಸ್ಯೆ ಅಶ್ವಿನಿ ಅಂಕಲಕೋಟಿ ಮಾತನಾಡಿ, ಪಟ್ಟಣದ ಅಭಿವೃದ್ಧಿಗಾಗಿ 1 ಕೋಟಿ 93 ಲಕ್ಷ ರೂಪಾಯಿ ಅನುದಾನ ಬಿಡುಗಡೆಯಾಗಿದೆ. ಆದರೆ ಅಧ್ಯಕ್ಷರು ಹಾಗೂ ಕಾಂಗ್ರೆಸ್ ಪಕ್ಷದ ಸದಸ್ಯರು ಅಧಿಕಾರಿಗಳ ಮೇಲೆ ಒತ್ತಡ ಹಾಕಿ ಏಕಾಏಕಿ ವಿಶೇಷ ಸಾಮಾನ್ಯ ಸಭೆ ನಡೆಸಿ ಕೇವಲ ಕಾಂಗ್ರೆಸ್ ಹಾಗೂ ಜೆಡಿಎಸ್ ಪಕ್ಷದ ಸದಸ್ಯರ ವಾರ್ಡ್‌ಗಳಿಗೆ ಕ್ರಿಯಾಯೋಜನೆ ತಯಾರಿಸಿ ಆಡಳಿತಾತ್ಮಕ ಅನುಮೋದನೆಗೆ ಸಲ್ಲಿಸಿರುವುದು ಖಂಡನೀಯ. ಎಲ್ಲ ವಾರ್ಡ್‌ಗಳ ಜನರು ಪುರಸಭೆಗೆ ತೆರಿಗೆ ಪಾವತಿಸುವುದರಿಂದ ಎಲ್ಲರಿಗೂ ಸಮಾನವಾದ ನ್ಯಾಯವನ್ನು ಒದಗಿಸಬೇಕಾದದ್ದು ಪ್ರಜಾಪ್ರತಿನಿಧಿಗಳ ಕರ್ತವ್ಯ.



ಈಚೆಗೆ ಸುರಿದ ಮಳೆಗೆ ಪ್ರವಾಹ ರೀತಿಯಲ್ಲಿ ಮಳೆ ನೀರು ಹರಿದು ಸಾಕಷ್ಟು ತೊಂದರೆ ಆಗಿರುವ ವಾರ್ಡ್‌ಗಳಲ್ಲಿ ಕಾಮಗಾರಿಗಳನ್ನು ಕೈಗೊಳ್ಳಲು ಸದಸ್ಯರು ಸೂಚಿಸಿದರೂ ಸಹ ಬೇಜವಾಬ್ದಾರಿಯುತ ಹೇಳಿಕೆಗಳನ್ನು ನೀಡಿ ತಾರತಮ್ಯ ಮಾಡಿರುವುದು ಕಂಡು ಬಂದಿದೆ. ಕಾರಣ ಜಿಲ್ಲಾಧಿಕಾರಿಗಳು ವಿಶೇಷ ಸಾಮಾನ್ಯ ಸಭೆಯಲ್ಲಿ ಮಂಡಿಸಿದ ಕ್ರಿಯಾಯೋಜನೆಗೆ ಅನುಮೋದನೆ ನೀಡಬಾರದು. ಹಾಗೇನಾದರೂ ಅನುಮೋದನೆ ಕೊಟ್ಟಿದ್ದೇ ಆದರೆ ಪುರಸಭೆ ಎದುರು ಉಗ್ರ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದರು.

> ಬಿಜೆಪಿ ಮುಖಂಡ ಗಂಗಾಧರ ಮೆಣಸಿನಕಾಯಿ ಮಾತನಾಡಿ, ಅನುದಾನವನ್ನು ಎಲ್ಲ ವಾರ್ಡ್‌ಗಳ ಅಭಿವೃದ್ಧಿಗೆ ಬಳಸುವುದು ನ್ಯಾಯ.
> ಆದರೆ ಕಾಂಗ್ರೆಸ್ ಸದಸ್ಯರು ಪ್ರತಿನಿಧಿಸುವ ವಾರ್ಡ್‌ಗಳಿಗೆ ಹಂಚಿಕೆ ಮಾಡಿರುವುದು ಪುರಸಭೆ ಅಧ್ಯಕ್ಷರ ಬೇಜವಾಬ್ದಾರಿಯನ್ನು ತೋರಿಸುತ್ತದೆ. ಆದ್ದರಿಂದ ಜಿಲ್ಲಾಧಿಕಾರಿಗಳು ಸಲ್ಲಿಸಿರುವ ಕ್ರಿಯಾಯೋಜನೆಯನ್ನು ಅನುಮೋದಿಸಬಾರದು. ಮತ್ತೊಮ್ಮೆ ಕ್ರಿಯಾಯೋಜನೆ ಸಿದ್ಧಪಡಿಸಬೇಕು. ಇಲ್ಲದಿದ್ದರೆ ಪುರಸಭೆ ಎದುರು ಪಕ್ಷದ ಕಾರ್ಯಕರ್ತರೊಂದಿಗೆ ಹೋರಾಟ ಮಾಡಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪುರಸಭೆ ಬಿಜೆಪಿ ಸದಸ್ಯರಾದ ಮಹೇಶ ಹುಲಬಜಾರ, ವಾಣಿ ಹತ್ತಿ, ಮಹಾದೇವಪ್ಪ ಅಣ್ಣಿಗೇರಿ, ಪೂರ್ಣಿಮಾ ಪಾಟೀಲ, ಕವಿತಾ ಶೆರಸೂರಿ, ಶೋಭಾ ಮೆಣಸಿನಕಾಯಿ, ಮಂಜಕ್ಕ ಗುಂಜಳ, ಪೂಜಾ ಖರಾಟೆ, ಮಂಜುನಾಥ ಹೊಗೆಸೊಪ್ಪಿನ, ರಮೇಶ ಹಾಳದೋಟದ, ರುದ್ರಪ್ಪ ಉಮಚಗಿ, ಬಸವರಾಜ ಕಲ್ಲೂರ ಇದ್ದರು.

### ಭಾಗ್ಯಲಕ್ಷ್ಮೀ ಬಾಂಡ್ ಮೆಚ್ಯುರಿಟಿ ಆದರೂ ಹಣ ನೀಡಲು ಅಧಿಕಾರಿಗಳಿಂದ ವಿಳಂಬ

# ಕಾರಣ ನೀಡದೇ ಹಣ ಮಂಜೂರು ಮಾಡಿ



■ವಿಜಯಸಾಕ್ಷಿ ಸುದ್ದಿ, ಗದಗ

2006-07ರಲ್ಲಿ ಅಂದಿನ ರಾಜ್ಯ ಸರ್ಕಾರ ವಿತರಿಸಿರುವ ಭಾಗ್ಯಲಕ್ಷ್ಮೀ ಬಾಂಡ್ ಮೆಚ್ಯುರಿಟಿ ಆದರೂ ಸಹ ನೂರಾರು ಫಲಾನುಭವಿಗಳಿಗೆ ಹಣ ನೀಡಲು ಅಧಿಕಾರಿಗಳು ವಿಳಂಬ ಮಾಡುತ್ತಿರುವುದನ್ನು ಖಂಡಿಸಿ ಗದಗ ಜಿಲ್ಲಾ ಸ್ಲಂ ಮಹಿಳಾ ಸಮಿತಿ ಪದಾಧಿಕಾರಿಗಳು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಮಹಿಳಾ ಸಮಿತಿ ಸಂಚಾಲಕಿ ಪರವೀನಬಾನು ಹವಾಲ್ದಾರ ಮಾತನಾಡಿ, ಕರ್ನಾಟಕ ಸರ್ಕಾವು ರಾಜ್ಯದಲ್ಲಿ ವಿಶೇಷವಾಗಿ ಬಡತನ ರೇಖೆಗಿಂತ ಕೆಳಗಿರುವ ಬಿಪಿಎಲ್ ಕುಟುಂಬಗಳಲ್ಲಿ ಜನಸಿರುವ ಹೆಣ್ಣು ಮಗುವಿಗಾಗಿ ಭಾಗ್ಯಲಕ್ಷ್ಮೀ ಯೋಜನೆಯನ್ನು ಜಾರಿಗೆ ತಂದಿದೆ. ಮಾರ್ಚ್ 31, 2006ರ ನಂತರ ಬಡತನ ರೇಖೆಗಿಂತ ಕೆಳಗಿರುವ ಬಿಪಿಎಲ್ ಕುಟುಂಬಗಳಲ್ಲಿ ಜನಿಸಿದ ಹೆಣ್ಣು ಮಕ್ಕಳ ಉತ್ತಮ ಭವಿಷ್ಯಕ್ಕಾಗಿ ಈ ಯೋಜನೆ ಅನುಕೂಲಕರವಾಗಿದೆ. ಭಾಗ್ಯಲಕ್ಷ್ಮೀ ಯೋಜನೆಯಡಿಲ್ಲಿ ಗದಗ ಜಿಲ್ಲೆಯಲ್ಲಿ ಈವರೆಗೊ ಸಾವಿರಾರು ಕುಟುಂಬಗಳು ತಮ್ಮ ಹೆಣ್ಣು ಮಗುವಿನ ನೋಂದಣಿ ಮಾಡಿಸಿ ಬಾಂಡ್‌ಗಳನ್ನು ಪಡೆದುಕೊಂಡಿದ್ದಾರೆ.

ಈಗ ಬಾಂಡ್ ಮೆಚ್ಯುರಿಟಿ ಆಗಿರುವ ಫಲಾನುಭವಿಗಳು ಸ್ಥಳೀಯ ಅಂಗನವಾಡಿ ಕೇಂದ್ರಗಳಲ್ಲಿ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಕಲಾಖೆಗಳಿಗೆ ಹೋಗಿ ವಿಚಾರಿಸಿದರೆ, ಇಲ್ಲದ ಕಾರಣಗಳನ್ನು ನೀಡಿ, ಹಣ ನೀಡಲು ಬರುವುದಿಲ್ಲ ಎಂದು ಅಲೆದಾಡಿಸುತ್ತಿದ್ದಾರೆ. ಕೂಡಲೇ ಜಿಲ್ಲಾಧಿಕಾರಿಗಳು 2006-07ರಲ್ಲಿ ಭಾಗ್ಯಲಕ್ಷ್ಮೀ ಯೋಜನೆಯಡಿ ನೋಂದಣಿ ಮಾಡಿ, ಈಗ ಅವಧಿ ಮುಗಿದಿರುವ ಬಾಂಡ್ ಫಲಾನುಭವಿಗಳಿಗೆ ▸▸3ನೇ ಪುಟಕ್ಕೆ

### ವಿವಿಧ ಅಭಿವೃದ್ಧಿ ಕಾರ್ಯಗಳಿಗೆ ಚಾಲನೆ ನೀಡಿದ ಶಾಸಕ ಜಿ.ಎಸ್. ಪಾಟೀಲ

# ಗ್ರಾಮದ ಸಮಗ್ರ ಅಭಿವೃದ್ಧಿಗೆ ಸದಾ ಬದ್ಧ

■ವಿಜಯಸಾಕ್ಷಿ ಸುದ್ದಿ, ರೋಣ

ಸೌಹಾರ್ದತೆಯ ತವರೂರಾದ ಮಾರನಬಸರಿ ಗ್ರಾಮದ ಸಮಗ್ರ ಅಭಿವೃದ್ಧಿಗೆ ಸದಾ ಬದ್ಧನಾಗಿದ್ದು, ಈ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ರಾಜ್ಯ ಖನಿಜ ನಿಗಮದ ಅಧ್ಯಕ್ಷ, ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಮಾರನಬಸರಿ ಗ್ರಾಮದಲ್ಲಿ ನಿರ್ಮಾಣಗೊಂಡ 20 ಲಕ್ಷ ರೂ ವೆಚ್ಚದ ಸಾರ್ವಜನಿಕ ಗ್ರಂಥಾಲಯದ ಉದ್ಘಾಟನೆ ಹಾಗೂ 70 ಲಕ್ಷ ರೂ ವೆಚ್ಚದ ಸಿ.ಸಿ ರಸ್ತೆ ಚರಂಡಿ ನಿರ್ಮಾಣ ಕಾಮಗಾರಿಗಳಿಗೆ ಭೂಮಿಪೂಜೆಯನ್ನು ನೆರವೇರಿಸಿ ಮಾತನಾಡಿದರು.

ಮಾರನಬಸರಿ ಗ್ರಾಮ ರಾಜಕೀಯವಾಗಿ ನನಗೆ ಶಕ್ತಿ ತುಂಬಿದ ಗ್ರಾಮವಾಗಿದೆ. ಈ ಗ್ರಾಮದ ಸರ್ವ ಜನಾಂಗದವರು ನನಗೆ ಪ್ರೀತಿ-ವಿಶ್ವಾಸವನ್ನು ತೇ-ೋರಿ ನನ್ನ ಗೆಲುವಿನಲ್ಲಿ ಪ್ರಮುಖ



ಪಾತ್ರವನ್ನು ವಹಿಸಿದ್ದಾರೆ. ಹೀಗಾಗಿ, ಗ್ರಾಮದ ಅಭಿವೃದ್ಧಿ ನನ್ನ ಮೊದಲ ಆದ್ಯತೆಯಾಗಿದೆ. ಈ ಹಿಂದೆ ನಾನು ಶಾಸಕನಾಗಿದ್ದಾಗ ಹಲವಾರು ಅಬಿವೃದ್ಧಿ ಕಾರ್ಯಗಳನ್ನು ಮಾಡಿದ್ದು ಇದಕ್ಕೆ ಸಾಕ್ಷಿ ಎಂದರು.

ಗ್ರಾಮದ ಪ್ರೌಢಶಾಲೆ ನಿರ್ಮಾಣಕ್ಕೆ ಅಗತ್ಯ ನೆರವು ನಿಡಲಾಗಿದೆ. ಶಾದಿ ಮಹಲ್, ರೇವಣಸಿದ್ದೇಶ್ವರ ಸಮುದಾಯ ಭವನ, ಯಾತ್ರಿ ನಿವಾಸ ಸೇರಿದಂತೆ ನರೆಗಲ್ಲ ಪಟ್ಟಣದಿಂದ ಕಳಕಾಪೂರ ರಸ್ತೆ, ಜಕ್ಕಲಿ ಗ್ರಾಮದಿಂದ ಕೊಪ್ಪದ ಕ್ರಾಸ್ ರಸ್ತೆಗಳನ್ನು ನಿರ್ಮಿಸುವ ಜೊತೆಗೆ ಗ್ರಾಮದ ಸಿಸಿ ರಸ್ತೆಗಳನ್ನು ನಿರ್ಮಿಸಿ ಗ್ರಾಮಸ್ಥರಿಗೆ ಅನುಕೂಲ ಕಲ್ಪಿಸಲಾಗಿದೆ. ಈಗ ಗ್ರಾಮದ ಅಭಿವೃದ್ಧಿಯ ದೃಷ್ಟಿಯಿಂದ ಮುಖ್ಯ ಹಳ್ಳದಿಂದ ರಾಯಣ್ಣ ವೃತ್ತದವರೆಗೆ ಸಿ.ಸಿ ರಸ್ತೆ ನಿರ್ಮಿಸಲು ಕ್ರಿಯಾಯೋಜನೆ ಸಲ್ಲಿಸಲಾಗಿದ್ದು, ಶೀಘ್ರವೇ ಭೂಮಿಪೂಜೆಯನ್ನು ನೆರವೇರಿಸಲಾಗುವುದು ಎಂದರು.

> ಗ್ರಾಮದ ಸಿದ್ದನಕೊಳ್ಳದ ಶ್ರೀಮಠ ಅಭಿವೃದ್ಧಿಗಾಗಿ 10 ಲಕ್ಷ ರೂ ಮತ್ತು ಗ್ರಾಮದೇವತೆ ಸಮುದಾಯ ಭವನ ನಿರ್ಮಾಣಕ್ಕೆ 3 ಲಕ್ಷ ರೂಗಳ ಅನುದಾನವನ್ನು ಒದಗಿಸಲಾಗಿದೆ. ಗ್ರಾಮದ ಕೆರೆ ತುಂಬಿಸಲು ಈಗಾಗಲೇ ಕ್ರಮ ಕೈಗೊಂಡಿದ್ದು, ಇನ್ನು ಕೆಲವೇ ದಿನಗಳಲ್ಲಿ ಕೃಷ್ಣಾ ನದಿ ನೀರು ಗ್ರಾಮಕ್ಕೆ ಹರಿದು ಬರಲಿದೆ. ಇದರಿಂದ ಅಂತರ್ಜಲ ಹೆಚ್ಚಾಗಿ ರೈತರಿಗೆ ಅನುಕೂಲವಾಗಿ, ಕುಡಿಯುವ ನೀರಿನ ಸಮಸ್ಯೆ ಕೂಡ ತಗ್ಗಲಿದೆ ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಗ್ರಾ.ಪಂ ಅಧ್ಯಕ್ಷ ವೀರಣ್ಣ ಮರಡಿ ಅಧ್ಯಕ್ಷತೆ ವಹಿಸಿದ್ದರು.

ವೇ.ಮೂ. ವಿಶ್ವನಾಥ ಭಟ್ಟ ವೈದ್ಯ, ಶರಣಪ್ಪ ಕುರಿ, ಶಿವಪ್ಪ ಜಾಲಿಹಾಳ, ಜಿ.ಪಂ ಮಾಜಿ ಉಪಾಧ್ಯಕ್ಷ ಎಸ್.ಎಚ್. ಹಾದಿಮನಿ, ತಾ.ಪಂ ಮಾಜಿ ಸದಸ್ಯ ಅಂದಪ್ಪ ಬಿಚ್ಚೂರ, ಸಂಜಯ ದೊಡ್ಡಮನಿ, ಗ್ರಾ.ಪಂ ಉಪಾಧ್ಯಕ್ಷೆ ಮಂಜುಳಾ ಮಾದರ, ತಾ.ಪಂ ಇಒ ಮಂಜುಳಾ ಹಕಾರಿ, ಈರಪ್ಪ ನಿಡಗುಂದಿ, ಶಿವಕುಮಾರ ದಿಂಡೂರ, ಅಲ್ಲಾಸಾಬ ಮೋತೆಖಾನ, ಶಂಕ್ರಪ್ಪ ಸರ್ವಿ, ಅಡಿವೆಪ್ಪ ಜಿಗಳೂರ, ಖಾಧಿರಸಾಬ ಕಳಕಾಪೂರ, ದಿಲ್‌ಶ್ಯಾದಬೇಗಂ ದೋಟಿಹಾಳ, ಹನಮವ್ವ ತಳವಾರ, ಮಹ್ಮದ ಸವಡಿ, ರಿಯಾಜ ಆಲೂರ, ಡಿ.ಡಿ. ದೋಟಿಹಾಳ, ಈರಣ್ಣ ಸಾಖಾ, ಫಕ್ಕೀರಪ್ಪ ಕುಕನೂರ ಸೇರಿದಂತೆ ಮುಖಂಡರು, ಅಭಿಯಂತರರು, ಪಿಡಿಒ ಉಪಸ್ಥಿತರಿದ್ದರು.

## ಸಂಪಾದಕೀಯ

# ಹೆಚ್ಚುತ್ತಿರುವ ಹೃದಯಾಘಾತಗಳು ಮತ್ತು ಸರ್ಕಾರದ ಮಹತ್ವದ ಹೆಜ್ಜೆ

ಇತ್ತೀಚಿನ ದಿನಗಳಲ್ಲಿ ಕರ್ನಾಟಕದಲ್ಲಿ ಹೃದಯಾಘಾತ ಪ್ರಕರಣಗಳ ಸಂಖ್ಯೆ ಆತಂಕಕಾರಿಯಾಗಿ ಏರುತ್ತಿದೆ. ಯುವ ಸಮುದಾಯದಲ್ಲಿಯೂ ಹೃದಯಾಘಾತಗಳು ಸಾಮಾನ್ಯವಾಗುತ್ತಿರುವುದು ಕಳವಳಕಾರಿ ವಿಷಯ.

ಬದಲಾದ ಜೀವನಶೈಲಿ, ಆಹಾರ ಪದ್ಧತಿ, ಒತ್ತಡ ಮತ್ತು ದೈಹಿಕ ಚಟುವಟಿಕೆಯ ಕೊರತೆ ಇದಕ್ಕೆ ಪ್ರಮುಖ ಕಾರಣಗಳೆಂದು ತಜ್ಞರು ಅಭಿಪ್ರಾಯಪಡುತ್ತಾರೆ. ಈ ಗಂಭೀರ ಸಮಸ್ಯೆಯನ್ನು ಮನಗಂಡಿರುವ ರಾಜ್ಯ ಸರ್ಕಾರ, ಹೃದಯಾಘಾತಗಳನ್ನು ತಡೆಯುವ ನಿಟ್ಟಿನಲ್ಲಿ ಮಹತ್ವದ ನಿರ್ಧಾರ ಕೈಗೊಂಡಿರುವುದು ಶ್ಲಾಘನೀಯ.

ಆರೋಗ್ಯ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಹರ್ಷ ಗುಪ್ತಾ ಅವರು ನೀಡಿರುವ ಮಾಹಿತಿ ಪ್ರಕಾರ, ರಾಜ್ಯದ ಎಲ್ಲಾ ತಾಲ್ಲೂಕುಗಳಿಗೂ 'ಸ್ಟೆಮಿ ಯೋಜನೆ' (STEMI – ST-Elevation Myocardial Infarction) ವಿಸ್ತರಿಸಲು ನಿರ್ಧರಿಸಲಾಗಿದೆ.

ಹೃದಯಾಘಾತಕ್ಕೊಳಗಾದವರಿಗೆ ತುರ್ತಾಗಿ ಚಿಕಿತ್ಸೆ ನೀಡುವಲ್ಲಿ 'ಸ್ಟೆಮಿ ಯೋಜನೆ' ನಿರ್ಣಾಯಕ ಪಾತ್ರ ವಹಿಸುತ್ತದೆ. ಇದು ರೋಗಿಗಳ ಪ್ರಾಣ ಉಳಿಸಲು ಮತ್ತು ನಂತರದ ಆರೋಗ್ಯ ಸಮಸ್ಯೆಗಳನ್ನು ತಡೆಯಲು ಸಹಕಾರಿಯಾಗಿದೆ.

ಹೃದಯಾಘಾತವಾದ ತಕ್ಷಣದ ಚಿಕಿತ್ಸೆ ಬಹಳ ಮುಖ್ಯವಾಗಿದ್ದು, ಈ ಯೋಜನೆ ಗ್ರಾಮೀಣ ಪ್ರದೇಶದ ಜನರಿಗೂ ಸುಲಭವಾಗಿ ಲಭ್ಯವಾಗುವಂತೆ ಮಾಡುವುದು ಸರ್ಕಾರದ ದೂರದೃಷ್ಟಿಯ ಕ್ರಮವಾಗಿದೆ.

ಕೇವಲ ವೈದ್ಯಕೀಯ ಸೌಲಭ್ಯಗಳನ್ನು ವಿಸ್ತರಿಸುವುದಷ್ಟೇ ಅಲ್ಲದೆ, ಹೃದಯಾಘಾತ ತಡೆಗೆ ಅಗತ್ಯವಾದ ಜೀವನಶೈಲಿ ಬದಲಾವಣೆಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವುದು ಅಷ್ಟೇ ಮುಖ್ಯ. ಆರೋಗ್ಯಕರ ಆಹಾರ ಕ್ರಮ, ನಿಯಮಿತ ವ್ಯಾಯಾಮ, ಯೋಗ ಮತ್ತು ಒತ್ತಡ ಮುಕ್ತ ಜೀವನಶೈಲಿ ಅಳವಡಿಸಿಕೊಳ್ಳುವಂತೆ ಜನರಿಗೆ ಅರಿವು ಮೂಡಿಸಬೇಕು.

ಈ ನಿಟ್ಟಿನಲ್ಲಿ ಆರೋಗ್ಯ ಇಲಾಖೆ, ಸರ್ಕಾರೇತರ ಸಂಸ್ಥೆಗಳು ಮತ್ತು ಸಮುದಾಯ ಸಂಘಟನೆಗಳು ಒಗ್ಗೂಡಿ ಕಾರ್ಯನಿರ್ವಹಿಸಬೇಕು. ಶಾಲೆಗಳಲ್ಲಿ, ಕಾಲೇಜುಗಳಲ್ಲಿ ಮತ್ತು ಕಾರ್ಯಸ್ಥಳಗಳಲ್ಲಿ ಆರೋಗ್ಯ ಶಿಕ್ಷಣ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು ಅತ್ಯಗತ್ಯ.

ಸರ್ಕಾರದ ಈ ಮಹತ್ವದ ನಿರ್ಧಾರವು ರಾಜ್ಯದ ಜನರ ಆರೋಗ್ಯ ಸುಧಾರಣೆಗೆ ದೊಡ್ಡ ಹೆಜ್ಜೆಯಾಗಿದೆ. ಈ ಯೋಜನೆಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಿ, ಸಾರ್ವಜನಿಕರಲ್ಲಿ ಆರೋಗ್ಯ ಜಾಗೃತಿ ಮೂಡಿಸುವ ಮೂಲಕ ಕರ್ನಾಟಕವನ್ನು ಹೃದಯಾಘಾತ ಮುಕ್ತ ರಾಜ್ಯವನ್ನಾಗಿ ಮಾಡಬೇಕಾಗಿದೆ.


ಇಂದು, ರಾಷ್ಟ್ರೀಯ ವೈದ್ಯರ ದಿನದ ನಿಮಿತ್ತ ಲೇಖನ | ಸುಂದರ ಕೈಬರಹದಿಂದ ಯಶಸ್ಸಿನ ಗಿರಿಯೇರಿದ ಡಾ. ಶಾಂತಗಿರಿ

# ಎಲ್ಲ ವೈದ್ಯರಂತಲ್ಲ ಇವರ ಕೈಬರಹ!

ಹುಲಕೋಟಿಯ ವೈದ್ಯ ಡಾ. ಶಾಂತಗಿರಿ ಮಲ್ಲಪ್ಪ ತಮ್ಮ ಗುಣಮಟ್ಟದ ಚಿಕಿತ್ಸೆಗೆ ಹಾಗೂ ಕೈಬರಹದ ಕ್ರಾಂತಿಗೆ ಕರ್ನಾಟಕದಲ್ಲಿ ಪ್ರಸಿದ್ಧರಾಗಿದ್ದಾರೆ. ಅವರು ಯಾವಾಗಲೂ ನವೀನ ಪರಿಕಲ್ಪನೆಗಳನ್ನು ತಂದಿದ್ದಾರೆ ಮತ್ತು ಅವರ ಸಾಮಾಜಿಕ ಸೇವೆ, ಆರೋಗ್ಯ ತಪಾಸಣೆ ಶಿಬಿರಗಳು ಮತ್ತು ವೈದ್ಯರಿಗಾಗಿ ಕೈಬರಹ ಸುಧಾರಣಾ ಕಾರ್ಯಕ್ರಮಕ್ಕಾಗಿ ಹೆಚ್ಚು ಸಾಧನೆಗೈದು ಯಶಸ್ವಿಯಾಗಿದ್ದಾರೆ. ಡಾ. ಶಾಂತಗಿರಿ ಮಲ್ಲಪ್ಪ ಯಾವಾಗಲೂ ತಮ್ಮ ರೋಗಿಗಳ ಕಲ್ಯಾಣದ ಬಗ್ಗೆ ಯೋಚಿಸುತ್ತಾರೆ. ಅವರು ಔಷಧಿಗಳ ಪ್ರಿಸ್ಕ್ರಿಪ್ಷನ್‌ಗಳನ್ನು ಇಂಗ್ಲಿಷ್ ಭಾಷೆಯ ಕ್ಯಾಪಿಟಲ್ ಅಕ್ಷರಗಳಲ್ಲಿ ಬರೆಯುತ್ತಾರೆ. ರೋಗಿಗಳಿಗೆ ತಾವು ಯಾವ ಔಷಧಿ ಸೇವಿಸುತ್ತಿದ್ದಾರೆ ಎಂಬುದು ತಿಳಿದಿರಲಿ ಎಂಬುದು ಡಾ ಶಾಂತಗಿರಿಯವರ ಅಂಬೋಣ.

ಈಗ ಡಾ. ಶಾಂತಗಿರಿ ಮಲ್ಲಪ್ಪ ಅವರು ಬಾಣಸವಾಡಿಯಲ್ಲಿ ಶಾಂತಗಿರಿ ಹೆಲ್ತ್‌ಕೇರ್ ಎಂಬ ಸ್ವಂತ ಆಸ್ಪತ್ರೆಯನ್ನು ಹೊಂದಿದ್ದಾರೆ ಮತ್ತು ಅವರು ಬೆಂಗಳೂರಿನಲ್ಲಿರುವ ತಮ್ಮ ಆಸ್ಪತ್ರೆಯಲ್ಲಿ 24X7 ಸೇವೆ ಸಲ್ಲಿಸುತ್ತಿದ್ದಾರೆ. ಅವರು ಪ್ರತಿದಿನ 80–90 ರೋಗಿಗಳನ್ನು ಭೇಟಿ ಮಾಡುತ್ತಾರೆ ಮತ್ತು ಅವರ ಕಾರ್ಯನಿರತ ವೇಳಾಪಟ್ಟಿಯ ನಡುವೆಯೂ ಲೇಖನಗಳನ್ನು ಬರೆಯಲು ಮತ್ತು ವೈದ್ಯರ ಕೈಬರಹ ಕಾರ್ಯಕ್ರಮಗಳು, ಆರೋಗ್ಯ ಶಿಬಿರಗಳು ಮತ್ತು ಇತರ ಸಾಮಾಜಿಕ ಕಾರ್ಯಗಳನ್ನು ಆಯೋಜಿಸಲು






ಸಮಯ ಮೀಸಲಿಡುತ್ತಾರೆ.

ಡಾ. ಶಾಂತಗಿರಿಯವರು ಕಳೆದ ಎರಡು ದಶಕಗಳಿಂದ ಇಂಗ್ಲಿಷ್ ಭಾಷೆಯಲ್ಲಿ ದೊಡ್ಡ ಅಕ್ಷರಗಳಲ್ಲಿ ಔಷಧಿ ಪ್ರಿಸ್ಕ್ರಿಪ್ಷನ್‌ಗಳನ್ನು ಬರೆಯುತ್ತಿದ್ದಾರೆ. 48 ವರ್ಷ ವಯಸ್ಸಿನ ವೈದ್ಯ ಡಾ. ಶಾಂತಗಿರಿ ಮಲ್ಲಪ್ಪ, 2003ರಲ್ಲಿ ಕರ್ನಾಟಕ ರಾಜ್ಯ ವೈದ್ಯರ ಕೈಬರಹ ಸುಧಾರಣಾ ಸಂಘವನ್ನು ಪ್ರಾರಂಭಿಸಿದರು, ಸಮಾನ ಮನಸ್ಕ ಜನರು ಕೈಬರಹ ತಜ್ಞರೊಂದಿಗೆ ಕೈಜೋಡಿಸಿ ವೈದ್ಯರ ಕೈಬರಹವನ್ನು ಸುಧಾರಿಸಲು ಕರ್ನಾಟಕದಲ್ಲಿ ನೂರಾರು ಶಿಬಿರಗಳನ್ನು ಆಯೋಜಿಸಿದರು. ಕೈಬರಹವು ಸ್ಪಷ್ಟವಾಗಿಲ್ಲದಿದ್ದರೆ, ಅದು ದೊಡ್ಡ ತಪ್ಪುಗಳಿಗೆ ಕಾರಣವಾಗಬಹುದು ಎಂದು ಡಾ. ಶಾಂತಗಿರಿ ಹೇಳುತ್ತಾರೆ. ಕೆಲವೊಮ್ಮೆ ಅರ್ಕಾಮೈನ್ ಮತ್ತು ಆರ್ಟಾಮೈನ್ ಸರಳ ಕೈಬರಹದಲ್ಲಿ ಬರೆಯುವಾಗ ಬಹುತೇಕ ಒಂದೇ ರೀತಿಯ ಆಂಗ್ಲ ಕಾಗುಣಿತಗಳನ್ನು ಕಂಡಂತಾಗುತ್ತದೆ. ಕೆಲವು ಔಷಧಿ ಅಂಗಡಿಯವರು ಗಡಿಬಿಡಿಯಲ್ಲಿ ಗೊಂದಲಕ್ಕೊಳಗಾಗಬಹುದು. ಕೈಬರಹ ಸುಧಾರಣಾ ಸಂಘಕ್ಕೆ ಈಗ 22 ವರ್ಷಗಳು ಕಳೆದಿವೆ ಮತ್ತು ಇಲ್ಲಿಯವರೆಗೆ ಸಾವಿರಾರು ವೈದ್ಯರು ಕೈಬರಹ ಸುಧಾರಣಾ ಕೋರ್ಸ್‌ಗೆ ಹಾಜರಾಗಿದ್ದಾರೆ.

ಡಾ. ಶಾಂತಗಿರಿ ಗದಗದ ಡಿ.ಜಿ. ಮೇಲ್ಮಾಳಗಿ ಆಯುರ್ವೇದ ಕಾಲೇಜಿನಲ್ಲಿ ತಮ್ಮ ಅಧ್ಯಯನವನ್ನು ಪೂರ್ಣಗೊಳಿಸಿದರು ಮತ್ತು ಹುಲಕೋಟಿ ಕೆ.ಎಚ್. ಪಾಟೀಲ್ ಪ್ರಕೃತಿ ಚಿಕಿತ್ಸೆ ಮತ್ತು ಯೋಗ ವಿಜ್ಞಾನ ಸಂಸ್ಥೆಯಿಂದ ತಮ್ಮ ವೃತ್ತಿಜೀವನವನ್ನು ಪ್ರಾರಂಭಿಸಿದರು. 2003ರಲ್ಲಿ ಅವರು ಬೆಂಗಳೂರಿಗೆ ಬಂದು ಎಂ.ಎಸ್. ರಾಮಯ್ಯ ಸ್ಮಾರಕ ಆಸ್ಪತ್ರೆ, ಕಲ್ಯಾಣ್ ನಗರದ ಲೋಖಂಡೆ ಆಸ್ಪತ್ರೆ ಮತ್ತು ಇತರ ಆಸ್ಪತ್ರೆಗಳಲ್ಲಿಯೂ ಕೆಲಸ ಮಾಡಿದರು.

ಡಾ. ಶಾಂತಗಿರಿ ಮಲ್ಲಪ್ಪ ಒಬ್ಬ ವೈದ್ಯ ಮಾತ್ರವಲ್ಲ, ತತ್ವಜ್ಞಾನಿ, ಸಾಮಾಜಿಕ ಕಾರ್ಯಕರ್ತ, ಪತ್ರಕರ್ತ. ಕರ್ನಾಟಕದ ಕನ್ನಡ ಮತ್ತು ಇಂಗ್ಲಿಷ್ ಭಾಷೆಯ ಪ್ರಮುಖ ಪತ್ರಿಕೆಗಳಲ್ಲಿ ಅವರು ಆರೋಗ್ಯದ ಕುರಿತು ಅನೇಕ ಲೇಖನಗಳನ್ನು ಬರೆದಿದ್ದಾರೆ. ಡಾ. ಶಾಂತಗಿರಿ 200ಕ್ಕೂ ಹೆಚ್ಚು ಆರೋಗ್ಯ ತಪಾಸಣಾ ಶಿಬಿರಗಳನ್ನು ಆಯೋಜಿಸಿದ್ದಾರೆ ಮತ್ತು ಅನೇಕ ಸುದ್ದಿ ವಾಹಿನಿಗಳು ಅವರ ಸಾಧನೆಗಳಿಗಾಗಿ ಅವರನ್ನು ಸಂದರ್ಶಿಸಿದ್ದಾರೆ.

ಡಾ. ಶಾಂತಗಿರಿಯವರ ಸ್ನೇಹಿತರು ಮತ್ತು ಹಿತೈಷಿಗಳು ಅವರ ವಿವರಗಳನ್ನು ಲಿಮ್ಕಾ ಬುಕ್ ಆಫ್ ವರ್ಲ್ಡ್ ರೆಕಾರ್ಡ್ಸ್ ಮತ್ತು ಗಿನ್ನೆಸ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್ಸ್‌ಗೆ ಕಳುಹಿಸಲು ಒತ್ತಾಯಿಸುತ್ತಿದ್ದಾರೆ. ನೂರಾರು ಸಂಸ್ಥೆಗಳು ಈಗ ಡಾ. ಶಾಂತಗಿರಿಯವರನ್ನು ಸಮಾಜಕ್ಕೆ ನೀಡಿದ ಸೇವೆಗಾಗಿ ಸನ್ಮಾನಿಸಿವೆ. ಅವರು 'ಆರೋಗ್ಯ ರಶ್ಮಿ' ಎಂಬ ಪುಸ್ತಕವನ್ನೂ ಬರೆದಿದ್ದಾರೆ. ಇದು ಅವರ ಅಮೂಲ್ಯವಾದ ಆರೋಗ್ಯ ಲೇಖನಗಳ ಸಂಗ್ರಹ. ಇದರಲ್ಲಿ 120ಕ್ಕೂ ಹೆಚ್ಚು ಲೇಖನಗಳಿವೆ. ಡಾ. ಶಾಂತಗಿರಿ ಬೆಂಗಳೂರಿನ ಅನೇಕ ಭಾಗಗಳಲ್ಲಿ ಬಡವರು, ಅಂಗವಿಕಲರಿಗೆ 24 ಗಂಟೆಗಳ ಸೇವೆಯನ್ನು ನೀಡಿದ್ದಾರೆ ಮತ್ತು ಹಲವಾರು ಜನರು ಅವರನ್ನು 'ಆಧುನಿಕ ಧನ್ವಂತರಿ' ಎಂದು ಕರೆಯುತ್ತಾರೆ.

ಡಾ. ಶಾಂತಗಿರಿ ಮಲ್ಲಪ್ಪ ಅವರು ಹುಲಕೋಟಿಯಲ್ಲಿ ಬಸಪ್ಪ ಮತ್ತು ನೀಲಪ್ಪ ದಂಪತಿಗಳಿಗೆ ಜನಿಸಿದರು. ಅವರು ತಮ್ಮ ಶಾಲಾ ದಿನಗಳಿಂದಲೂ ಅದ್ಭುತ ವಿದ್ಯಾರ್ಥಿಯಾಗಿದ್ದಾರೆ. ಅವರು ಅಂತಾರಾಷ್ಟ್ರೀಯ ಮಟ್ಟದಲ್ಲಿ ಲೆಕ್ಕವಿಲ್ಲದಷ್ಟು ಮನ್ನಣೆಗಳನ್ನು ಪಡೆದಿದ್ದಾರೆ ಮತ್ತು ಅವರ ಶ್ರೇಷ್ಠ ಸಾಧನೆಗಳಿಗಾಗಿ ಅನೇಕ ಪ್ರಶಸ್ತಿಗಳನ್ನು ಪಡೆದಿದ್ದಾರೆ.

ಅವರು ದೆಹಲಿಯಲ್ಲಿ ಡಾ. ಅಬ್ದುಲ್ ಕಲಾಂ ಎಕ್ಸಲೆನ್ಸ್ ಪ್ರಶಸ್ತಿ ಮತ್ತು ಸಿಂಗಾಪುರದಿಂದ ಇಂಟರ್ನ್ಯಾಷನಲ್ ಗ್ಲೋರಿ ಆಫ್ ಇಂಡಿಯಾ ಪ್ರಶಸ್ತಿಯನ್ನೂ ಪಡೆದಿದ್ದಾರೆ. ಡಾ. ಶಾಂತಗಿರಿ ಸರಳ ವ್ಯಕ್ತಿ. ಅವರ ಪತ್ನಿ ದ್ರಾಕ್ಷಾಯಣಿ ಶಾಂತಗಿರಿ ಅವರಿಗೆ ಸ್ಫೂರ್ತಿಯಾಗಿದ್ದಾರೆ ಮತ್ತು ಅವರ ಎಲ್ಲಾ ಪ್ರಯತ್ನಗಳಿಗೆ ಬೆಂಬಲ ನೀಡಿದ್ದಾರೆ.

ಡಾ. ಶಾಂತಗಿರಿ ಮಲ್ಲಪ್ಪ ಅವರು ಕಾನೂನು ಮತ್ತು ಪ್ರವಾಸೋದ್ಯಮ ಸಚಿವ ಡಾ. ಎಚ್.ಕೆ. ಪಾಟೀಲ್ ಅವರ ಸಹಾಯಕ್ಕಾಗಿ ಅವರ ಕೊಡುಗೆಗಳು ಮತ್ತು ಆಶೀರ್ವಾದಗಳನ್ನು ಸ್ಮರಿಸುತ್ತಾರೆ. ಅವರೇ ಹೇಳುವಂತೆ, 'ಡಾ. ಎಚ್. ಕೆ. ಪಾಟೀಲರು ನನಗೆ ಯಶಸ್ಸಿನ ಹಾದಿಯನ್ನು ತೋರಿಸಿದ್ದಾರೆ. ನನ್ನ ಜೀವನದ ಪ್ರತಿಯೊಂದು ಹಂತದಲ್ಲೂ ಎಚ್ ಕೆ. ಪಾಟೀಲರಿಂದ ನನಗೆ ಸಂಪೂರ್ಣ ಬೆಂಬಲ ಸಿಕ್ಕಿದೆ ಮತ್ತು ಎಲ್ಲದಕ್ಕೂ ನಾನು ಅವರಿಗೆ ಕೃತಜ್ಞನಾಗಿದ್ದೇನೆ'.

**– ಶ್ರೀಕಾಂತ್ ರವೀಂದ್ರ ಕೊಪ್ಪರ್.**
ತೆರಿಗೆ ಸಲಹೆಗಾರರು, ಗದಗ.

# ಆಟೋ ಓಡಿಸುವಾಗಲೇ ಹೃದಯಾಘಾತ: ದಿಢೀರ್ ರಸ್ತೆಗೆ ಕುಸಿದು ಚಾಲಕ ಸಾವು!

■ ವಿಜಯಸಾಕ್ಷಿ ಸುದ್ದಿ, ಹಾಸನ

ಜಿಲ್ಲೆಯಲ್ಲಿ ಹೃದಯಾಘಾತ ಪ್ರಕರಣಗಳು ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ರಾಜ್ಯದ ಜನರಲ್ಲಿ ಆತಂಕ ಮೂಡಿಸಿದೆ. ಅದರಂತೆ ಸೋಮವಾರ ಸಂಜೆ ವೇಳೆ ಆಟೋ ಚಾಲಕನೋರ್ವ ಹೃದಯಾಘಾತದಿಂದ ರಸ್ತೆಗೆ ಕುಸಿದುಬಿದ್ದು ಸಾವನ್ನಪ್ಪಿದ ದುರ್ಘಟನೆ ನಡೆದಿದೆ.

ಮೃತರನ್ನು ಹಾಸನ ನಗರದ ರಂಗೋಲಿ ಹಳ್ಳ ಬಡಾವಣೆ ನಿವಾಸಿ ಸತ್ಯನಾರಾಯಣ ರಾವ್ (63) ಎಂದು ಗುರುತಿಸಲಾಗಿದೆ. ಅವರು ಪ್ರತಿದಿನದಂತೆ ಸೋಮವಾರ ಬೆಳಿಗ್ಗೆಯೂ ಆಟೋ ಚಾಲನೆಗಾಗಿ ಮನೆಯಿಂದ ಹೊರಟಿದ್ದರು. ಹಾಸನಾಂಬ ದೇಗುಲ ಹಿಂಭಾಗದ ಹೊಸಲೈನ್ ರಸ್ತೆಯ ಬಳಿ ಆಟೋ ಚಲಾಯಿಸುತ್ತಿದ್ದ ವೇಳೆ ಅಸ್ವಸ್ಥರಾಗಿದ್ದು, ತಕ್ಷಣವೇ ಆಟೋದೊಳಗೆ ಕುಸಿದು ಬಿದ್ದರು. ಈ ಘಟನೆಯ ಸಮಯದಲ್ಲಿ ಅಕ್ಕಪಕ್ಕದಲ್ಲಿದ್ದ ಜನರು ಬೆಚ್ಚಿಬಿದ್ದು, ಸಹಾಯಕ್ಕೆ ಓಡಿದರು. ಸ್ಥಳದಲ್ಲೇ ಹಾಜರಿದ್ದ ನರ್ಸಿಂಗ್ ವಿದ್ಯಾರ್ಥಿಗಳು ತಕ್ಷಣ ಸತ್ಯನಾರಾಯಣರನ್ನು ಆಸ್ಪತ್ರೆಗೆ ಕರೆದೊಯ್ದರು. ಆದರೆ ಆಗಲೇ ಅವರ ಪ್ರಾಣ ಹೋಗಿದ್ದಾಗಿ ವೈದ್ಯರು ದೃಢಪಡಿಸಿದರು. ಸತ್ಯನಾರಾಯಣ ರಾವ್ ಅವರು ಕೆಲ ಸಮಯದ ಹಿಂದೆ ಹೃದಯ ಸಂಬಂಧಿ ಖಾಯಿಲೆಗೆ ಚಿಕಿತ್ಸೆ ಪಡೆದು ಚೇತರಿಸಿಕೊಂಡಿದ್ದರು.

# ನಾಡಪ್ರಭು ಕೆಂಪೇಗೌಡ ಜಯಂತಿ ಆಚರಣೆ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಕೆಜಿಎಂಎಸ್ ಶಾಲೆಯಲ್ಲಿ ನಾಡಪ್ರಭು ಕೆಂಪೇಗೌಡರ ಜಯಂತಿಯನ್ನು ಆಚರಿಸಲಾಯಿತು.

ಮುಖ್ಯ ಶಿಕ್ಷಕ ಬಿ.ಬಿ. ಕುರಿ ಮಾತನಾಡಿ, ಕೆಂಪೇಗೌಡರು ಇಂದು ನಾವು ಬೆಂಗಳೂರು ಎಂದು ಕರೆಯುವ ಬೃಹತ್ ಪಟ್ಟಣವನ್ನು ಬೆಂದಕಾಳೂರು ಎಂಬ ಹೆಸರಿನಲ್ಲಿ ಸ್ಥಾಪಿಸಿದರು. ದೂರ ದೃಷ್ಟಿಯನ್ನಿಟ್ಟುಕೊಂಡು ಸ್ಥಾಪಿಸಿದ ಈ ಪಟ್ಟಣವಿಂದು ನಮ್ಮ ರಾಜ್ಯದ ರಾಜಧಾನಿಯಾಗಿ ಮೆರೆಯುತ್ತಿದೆ. ಈ ಬೆಂದಕಾಳೂರಿನಲ್ಲಿ ಅವರು ನೀರಿನ ಕೊರತೆಯಾಗಬಾರದೆಂದು ಸಾವಿರಾರು ಕೆರೆಗಳನ್ನು ನಿರ್ಮಿಸಿದರು. ಪಟ್ಟಣದ ಎಲ್ಲ ಸ್ಥಳಗಳಲ್ಲಿ ಉದ್ಯಾನವನಗಳನ್ನು ನಿರ್ಮಿಸುವ ಮೂಲಕ ಬೆಂಗಳೂರಿಗೆ ಉದ್ಯಾನಗಳ ನಗರಿ ಎಂಬ ಹೆಸರು ಬರಲು ಕಾರಣೀಕರ್ತರಾದರು. ಅಂಥವರ ಜನ್ಮ ದಿನವನ್ನು ಆಚರಿಸುವ ಮೂಲಕ ನಾಡಿನ ಜನತೆ ಇಂದು ಅವರಿಗೆ ತನ್ನ ಗೌರವವನ್ನು ಸಮರ್ಪಣೆ ಮಾಡುತ್ತಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಶಿಕ್ಷಕಿಯರಾದ ಎಲ್.ಎನ್ ಚವ್ಹಾಣ, ಅಣಗೌಡ್ರ, ಎಸ್.ಐ. ಜಗಾಪೂರ, ಲಕ್ಷ್ಮಿ ವಡ್ಡರ, ರಾಜೇಶ್ವರಿ ತೊಂಡಿಹಾಳ ಮತ್ತು ಶಿಕ್ಷಕರಾದ ಎಂ.ಎಸ್. ಮಾಳಶೆಟ್ಟಿ, ಡಿ.ವಿ. ಕಳ್ಳಿ, ಜೆ.ಎ. ಪಾಟೀಲ ಮತ್ತು ವಿದ್ಯಾರ್ಥಿಗಳಿದ್ದರು.

# ಅವಿರತ ಪ್ರಯತ್ನವೇ ಸಾಧನೆಯ ಮೆಟ್ಟಿಲು

■ ವಿಜಯಸಾಕ್ಷಿ ಸುದ್ದಿ, ಗದಗ

ಶೈಕ್ಷಣಿಕ ಜೀವನದ ಪ್ರಮುಖ ಘಟ್ಟವಾದ ಪದವಿಪೂರ್ವ ಹಂತವು ವಿದ್ಯಾರ್ಥಿಗಳ ಭವಿಷ್ಯದ ಭದ್ರ ಬುನಾದಿಯಾಗಿದೆ. ಈ ಸಮಯದಲ್ಲಿ ವಿದ್ಯಾರ್ಥಿಗಳು ಶ್ರದ್ಧೆ, ಸತತ ಪ್ರಯತ್ನಗಳಿಂದ ಸಾಧನೆ ಮಾಡಬೇಕೆಂದು ಡಾ. ವೀರೇಶ ಹಂಚಿನಾಳ ಕರೆ ನೀಡಿದರು.

ಸನ್ಮಾರ್ಗ ಕಾಲೇಜಿನ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಸಮಾರಂಭದಲ್ಲಿ ಪಾಲ್ಗೊಂಡು ವರು ಮಾತನಾಡಿದರು.

ಸಂಸ್ಥೆಯ ನಿರ್ದೇಶಕ ಪ್ರೊ. ಪುನೀತ ದೇಶಪಾಂಡೆ ಮಾತನಾಡಿ, ವಿದ್ಯಾಲಯವು ನಡೆದು ಬಂದ ಹೆಜ್ಜೆ ಗುರುತುಗಳು ಹಾಗೂ ಸಾಧನೆಯ ಸೋಪಾನಗಳನ್ನು ಅನಾವರಣಗೊಳಿಸಿ, ವಿದ್ಯಾರ್ಥಿಗಳು ಸಂಸ್ಕೃತಿ, ಸಂಸ್ಕಾರಗಳ ಜೊತೆಗೆ ಸನ್ಮಿತ್ರರನ್ನು ಬೆಳೆಸಿಕೊಂಡಾಗ ಶೈಕ್ಷಣಿಕ ಸಾಧನೆ ಸುಲಭ ಸಾಧ್ಯ ಎಂದರು.



ಅಧ್ಯಕ್ಷತೆ ವಹಿಸಿದ್ದ ಸ್ಟುಡೆಂಟ್ಸ್ ಎಜ್ಯುಕೇಶನ್ ಸೊಸೈಟಿಯ ಚೇರ್‌ಮನ್ ಪ್ರೊ. ರಾಜೇಶ ಕುಲಕರ್ಣಿ, ಕಾಲೇಜಿನ ಪ್ರಾಚಾರ್ಯ ಪ್ರೊ. ಪ್ರೇಮಾನಂದ ರೋಣದ ಮಾತನಾಡಿದರು. ವೇದಿಕೆಯ ಮೇಲೆ ಸಂಸ್ಥೆಯ ನಿರ್ದೇಶಕರಾದ ಪ್ರೊ. ರೋಹಿತ್ ಒಡೆಯರ್, ಪ್ರೊ. ರಾಹುಲ ಒಡೆಯರ್, ಪ್ರೊ. ಸಯ್ಯದ್ ಮತೀನ್ ಮುಲ್ಲಾ ಹಾಗೂ ಆಡಳಿತಾಧಿಕಾರಿ ಎಮ್.ಸಿ. ಹಿರೇಮಠರು ಉಪಸ್ಥಿತರಿದ್ದರು.

ಪ್ರೊ. ಹೇಮಂತ ದಳವಾಯಿ ನಿರೂಪಿಸಿ, ಸಂಸತ್ತಿನ ಪದಾಧಿಕಾರಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಿದರು. ಮಾನ್ಯ ಅಡಿಗ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಮುರಲೀಧರ ಸಂಕನೂರ ಸ್ವಾಗತಿಸಿದರು. ಉಪನ್ಯಾಸಕಿ ಪ್ರೊ. ಹೀನಾ ಕೌಸರ ಮಾಳೆಕೊಪ್ಪ ವಂದಿಸಿದರು.

# ನಾಳೆ ವಿಶೇಷ ಸಹಕಾರ ತರಬೇತಿ ಶಿಬಿರ

■ ವಿಜಯಸಾಕ್ಷಿ ಸುದ್ದಿ, ಗದಗ

ಸಹಕಾರ ಇಲಾಖೆ ಗದಗ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು, ಗದಗ ಜಿಲ್ಲಾ ಸಹಕಾರ ಯೂನಿಯನ್ ನಿ., ಗದಗ ಹಾಗೂ ಧಾರವಾಡ ಹಾಲು ಒಕ್ಕೂಟ, ಧಾರವಾಡ ಇವರ ಸಂಯುಕ್ತ ಆಶ್ರಯದಲ್ಲಿ ನರಗುಂದ ತಾಲೂಕಿನ ಎಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಅಧ್ಯಕ್ಷರು, ಉಪಾಧ್ಯಕ್ಷರು, ಮುಖ್ಯ ಕಾರ್ಯನಿರ್ವಾಹಕರು ಹಾಗೂ ಹಾಲು ಪರೀಕ್ಷಕರುಗಳಿಗೆ ವಿಶೇಷ ಸಹಕಾರ ತರಬೇತಿ ಶಿಬಿರ ವನ್ನು ಜುಲೈ 2 ರಂದು ಬೆಳಿಗ್ಗೆ 10 ನರಗುಂದ ಪಟ್ಟಣದ ತಾಲೂಕ ಪಂಚಾಯತ ಸಭಾಭವನ ಹಮ್ಮಿಕೊಳ್ಳಲಾಗಿದೆ.

ಗದಗ ಜಿಲ್ಲಾ ಸಹಕಾರ ಯೂನಿಯನ್‌ನ ಅಧ್ಯಕ್ಷರಾದ ಸಿ.ಎಂ. ಪಾಟೀಲ ಅಧ್ಯಕ್ಷತೆ ವಹಿಸಲಿದ್ದಾರೆ. ಕರ್ನಾಟಕ ರಾಜ್ಯ ಸಹಕಾರಿ ಹಾಲು ಉತ್ಪಾದಕರ ಮಹಾಮಂಡಳ ನಿರ್ದೇಶಕರಾದ ಎಚ್. ಜಿ. ಹಿರೇಗೌಡ್ರ ಉದ್ಘಾಟಿಸಲಿದ್ದಾರೆ.

ಗದಗ ಜಿಲ್ಲಾ ಸಹಕಾರ ಯೂನಿಯನ್‌ನ ಉಪಾಧ್ಯಕ್ಷ ವಾಯ್. ಎಫ್. ಪಾಟೀಲ, ಗದಗ ಜಿಲ್ಲೆಯ ಸಹಕಾರ ಸಂಘಗಳ ಉಪನಿಬಂಧಕಿಯರಾದ ಶ್ರೀಮತಿ ಎಸ್. ಎಸ್. ಕಬಾಡೆ, ಸಹಕಾರ ಸಂಘಗಳ ಲೆಕ್ಕಪರಿಶೋಧನಾ ಇಲಾಖೆ ಗದಗ ಉಪನಿರ್ದೇಶಕರಾದ ಅರವಿಂದ ಎನ್. ನಾಗಜ್ಜನವರ, ಸಹಕಾರ ಸಂಘಗಳ ಸಹಾಯಕ ನಿಬಂಧಕಿಯರಾದ ಶ್ರೀಮತಿ ಪುಷ್ಪಾ ಕೆ. ಕಡಿವಾಳ, ಧಾರವಾಡ ಹಾಲು ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕರಾದ ವಿರೇಶ, ನರಗುಂದ ತಾಲೂಕಿನ ಸಹಕಾರ ಅಭಿವೃದ್ಧಿ ಅಧಿಕಾರಿಗಳಾದ ಪ್ರಕಾಶ ನವಲಗುಂದ, ಧಾರವಾಡ ಹಾಲು ಒಕ್ಕೂಟದ ಗದಗ ಜಿಲ್ಲಾ ಮುಖ್ಯಸ್ಥರಾದ ಡಾ. ಪ್ರಸನ್ನ ಎಸ್. ಪಟ್ಟೇದ, ಧಾರವಾಡ ಹಾಲು ಒಕ್ಕೂಟದ ನರಗುಂದ ತಾಲೂಕಿನ ವಿಸ್ತರಣಾಧಿಕಾರಿಗಳಾದ ದಿಲೀಪ್ ಆಯ್. ನದಾಫ್ ಪಾಲ್ಗೊಳ್ಳುತ್ತಾರೆ ಎಂದು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಚಂದ್ರಶೇಖರ ಎಸ್. ಕರಿಯಪ್ಪನವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ತರಬೇತಿ ಕಾರ್ಯಾಗಾರದಲ್ಲಿ ಮಾರುಕಟ್ಟೆಯ ಮೇಲೆ ಹಾಲಿನ ಗುಣಮಟ್ಟ ಪ್ರಭಾವ ಕುರಿತು, ಧಾರವಾಡ ಹಾಲು ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕರಾದ ಡಾ. ವಿರೇಶ ತರಲಿ, ಶುದ್ಧ ಹಾಗೂ ಅಧಿಕ ಹಾಲು ಉತ್ಪಾದನೆ ಮತ್ತು ಅಗೋಚರ ಕೆಚ್ಚಲುಬಾವು ಕುರಿತು ಕ.ಹಾ.ಮ.ನಿವೃತ್ತ ಜಂಟಿ ನಿರ್ದೇಶಕರಾದ ಡಾ. ಎಂ.ಬಿ. ಮಡಿವಾಳರ ಹಾಗೂ ಸಹಕಾರ ಸಂಘಗಳಲ್ಲಿ ಲೆಕ್ಕಪತ್ರಗಳ ನಿರ್ವಹಣೆ ಕುರಿತು ಧಾರವಾಡ ಹಾಲು ಒಕ್ಕೂಟದ ನಿವೃತ್ತ ಸಹಾಯಕ ವ್ಯವಸ್ಥಾಪಕರಾದ ಬಿ. ಪಿ. ಹಿರೇಮಠ ಉಪನ್ಯಾಸ ನೀಡಲಿದ್ದಾರೆ.

# ಬಿ.ಕಾಂ ವಿದ್ಯಾರ್ಥಿಗಳ ವಾರ್ಷಿಕೋತ್ಸವ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮನೋರಮಾ ಮಹಾವಿದ್ಯಾಲಯದ ಬಿ.ಕಾಂ ವಿದ್ಯಾರ್ಥಿಗಳ ವಾರ್ಷಿಕೋತ್ಸವ ಹಾಗೂ ಪಾರಿತೋಷಕ ವಿತರಣೆ ಕಾರ್ಯಕ್ರಮ ಜರುಗಿತು.

ಪ್ರೊ. ಎಸ್.ಎಚ್. ಬಡೆಖಾನವರು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ವಿದ್ಯಾರ್ಥಿಗಳು ಶ್ರದ್ಧಾ ಭಕ್ತಿಯಿಂದ ಅಧ್ಯಯನಶೀಲರಾದರೆ ಉತ್ತಮ ಫಲಿತಾಂಶ ಹೊಂದುವಿರಿ. ವಿದ್ಯೆಯ ಜೊತೆಗೆ ಆತ್ಮವಿಶ್ವಾಸ ಹಾಗೂ ಅಂತರಾತ್ಮದ ಅರಿವಿನ ಮೂಲಕ ಜೀವನದಲ್ಲಿ ಯಶಸ್ಸು ಗಳಿಸಲು ಸಾಧ್ಯ ಎಂದರು.



ಪ್ರಾಚಾರ್ಯ ಬಿ.ಎಸ್. ಹಿರೇಮಠ ಮಾತನಾಡಿ, ವಿದ್ಯಾರ್ಥಿಗಳು ಹೆತ್ತ ತಂದೆ–ತಾಯಿ, ಕಲಿತ ಶಾಲೆ, ಕಲಿಸಿದ ಗುರು ಮತ್ತು ಹೊತ್ತ ಭೂಮಿಯ ಋಣ ತೀರಿಸಬೇಕಾದರೆ ಸಮಾಜ ಮೆಚ್ಚುವ ರೀತಿಯಲ್ಲಿ ಉತ್ತಮ ಪ್ರಜೆಗಳಾಗಬೇಕು. ವಿದ್ಯಾರ್ಥಿ ಜೀವನ ಅತ್ಯಂತ ಅಮೂಲ್ಯವಾದದ್ದು. ಓದುವ ಸಮಯದಲ್ಲಿ ಕಾಲಹರಣ ಮಾಡಿದರೆ ಕಷ್ಟ ಕಟ್ಟಿಟ್ಟ ಬುತ್ತಿ ಎಂಬುದನ್ನು ಮರೆಯಬಾರದು ಎಂದರು. ಸಭೆಯ ಅಧ್ಯಕ್ಷತೆಯನ್ನು ಸಂಸ್ಥೆಯ ಚೇರಮನ್ ಎನ್. ಎಮ್. ಕುಡತರಕರ ವಹಿಸಿದ್ದರು. ವಿವಿಧ ವಿಭಾಗಗಳಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಬಹುಮಾನ ಹಾಗೂ ಪ್ರಶಸ್ತಿಗಳನ್ನು ವಿತರಿಸಲಾಯಿತು. ಈ ಸಂದರ್ಭದಲ್ಲಿ ಸಂಸ್ಥೆಯ ಕಾರ್ಯದರ್ಶಿ ಮಂಜುನಾಥ ಕುಡತರಕರ, ಸಂಸ್ಥೆಯ ಖಜಾಂಚಿ ಸಂಜಯ ಕುಡತರಕರ, ನಿರ್ದೇಶಕ ಚೇತನ ಕುಡತರಕರ, ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ಸಂಯೋಜಕರುಗಳಾದ ಪ್ರೊ. ಅಲ್ವೀನಾ ಡಿ, ಪ್ರೊ. ಸವೀತಾ ಪೂಜಾರ, ಪ್ರೊ. ಚೈತ್ರಾ ಡಿ, ಪ್ರೊ. ಶಾಹೀದಾ ಶಿರಹಟ್ಟಿ ಸೇರಿದಂತೆ ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು ಇದ್ದರು.

# ಮಚ್ಚಿನಿಂದ ಮಹಿಳೆ ಭೀಕರ ಹತ್ಯೆ : ಪತಿ, ಅತ್ತೆ ವಿರುದ್ಧ ಕೊಲೆ ಆರೋಪ

■ ವಿಜಯಸಾಕ್ಷಿ ಸುದ್ದಿ, ಚಾಮರಾಜನಗರ

ಮಹಿಳೆಯೋರ್ವಳನ್ನು ಮಚ್ಚಿನಿಂದ ಕೊಚ್ಚಿ ಭೀಕರವಾಗಿ ಹತ್ಯೆ ಮಾಡಿರುವ ಘಟನೆ ಚಾಮರಾಜನಗರ ಜಿಲ್ಲೆಯ ದೊಳ್ಳಿಪುರ ಗ್ರಾಮದಲ್ಲಿ ಜರುಗಿದೆ. ಶುಭಾ (38) ಮೃತ ಮಹಿಳೆ. ಈತನ ಗಂಡ ಮಹೇಶ್ ಹಾಗೂ ಅತ್ತೆ ಭಾರತಿ ವಿರುದ್ಧ ಕೊಲೆ ಆರೋಪ ಕೇಳಿ ಬಂದಿದೆ.

ಮೃತ ಮಹಿಳೆಯು ಅತ್ತೆ ಹಾಗೂ ಗಂಡನ ಜೊತೆ ತೋಟದ ಮನೆಯಲ್ಲಿ ವಾಸಿಸುತ್ತಿದ್ದರು. ಆದರೆ ಸೋಮವಾರ ಬೆಳಿಗ್ಗೆ ಯಾರೋ ಕೊಲೆ ಮಾಡಿದ್ದಾರೆ ಎಂದು ಮೃತ ಮಹಿಳೆಯ ಗಂಡ ಮಹೇಶ್, ದೂರವಾಣಿ ಮೂಲಕ ಪೊಲೀಸ್ ಠಾಣೆಗೆ ವಿಷಯ ಮುಟ್ಟಿಸಿದ್ದ. ಅಲ್ಲದೆ ಬೆಂಗಳೂರಿನಲ್ಲಿರುವ ಶುಭಾ ಅವರ ತಂಗಿ ಶೃತಿಗೂ ಸಹ ಮಹೇಶ್ ಕರೆ ಮಾಡಿ ವಿಷಯ ತಿಳಿಸಿದ್ದಾರೆ. ವಿಷಯ ತಿಳಿದು ಸ್ಥಳಕ್ಕೆ ಎಎಸ್ಪಿ ಶಶಿಧರ್, ಡಿವೈಎಸ್ಪಿ ಹಾಗೂ ಪೊಲೀಸ್ ಅಧಿಕಾರಿಗಳು ಭೇಟಿ ನೀಡಿ ಪರಿಶೀಲಿಸಿದರು. ಹಣಕಾಸಿನ ವಿಚಾರದಲ್ಲಿ ನನ್ನ ಅಕ್ಕ ಶುಭಾಳನ್ನು ಅವಳ ಪತಿ ಮಹೇಶ್ ಮತ್ತು ಅತ್ತೆ ಭಾರತಿ ಆಗಿಂದಾಗ್ಗೆ ಪೀಡಿಸುತ್ತಿದ್ದರು. ನಿಮ್ಮ ಅಪ್ಪನ ಮನೆಯಿಂದ ಹಣ ತಂದುಕೊಡು ಎಂದು ಕಿರುಕುಳ ನೀಡುತ್ತಿದ್ದರು. ಈ ವಿಚಾರದಿಂದ ನನ್ನ ಅಕ್ಕ ಶುಭಾಳಿಗೆ ಮಹೇಶ್ ಮತ್ತು ಆತನ ತಾಯಿ ಭಾರತಿ ಯಾವುದೋ ಆಯುಧದಿಂದ ಹೊಡೆದು ಕೊಂದಿದ್ದಾರೆ ಎಂದು ಶುಭಾ ಅವರ ತಂಗಿ ಶೃತಿ ಅನುಮಾನ ವ್ಯಕ್ತಪಡಿಸಿ ಮಹೇಶ್ ಹಾಗೂ ಭಾರತಿ ಅವರ ವಿರುದ್ಧ ದೂರು ನೀಡಿದ್ದಾರೆ.

# ಎಸ್‌ಎವಿ ಬಾಲಕಿಯರ ಪ್ರೌಢಶಾಲೆಯಲ್ಲಿ ಅಂತಾರಾಷ್ಟ್ರೀಯ ಮಾದಕ ವಸ್ತು ವಿರೋಧಿ ದಿನಾಚರಣೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಶ್ರೀ ಅನ್ನದಾನ ವಿಜಯ ಬಾಲಿಕೆಯರ ಪ್ರೌಢಶಾಲೆಯಲ್ಲಿ ಅಂತಾರಾಷ್ಟ್ರೀಯ ಮಾದಕ ವಸ್ತು ವಿರೋಧಿ ದಿನಾಚರಣೆಯನ್ನು ಆಚರಿಸಲಾಯಿತು.

ಮುಖ್ಯ ಶಿಕ್ಷಕ ಎಸ್.ಎನ್. ಹೂಲಗೇರಿ ಮಾತನಾಡಿ, ಮಾದಕ ವಸ್ತುಗಳು ಎಂದಿಗೂ ನಮ್ಮ ಜೀವಕ್ಕೆ ಹಾನಿಕಾರಕ. ಇವುಗಳ ಸೇವನೆಯಿಂದ ನಮ್ಮ ಜೀವನವೂ ಕೂಡ ದುರ್ಭರವಾಗುತ್ತದೆ.



ಮನೆಯಲ್ಲಿನ ಶಾಂತಿ, ನೆಮ್ಮದಿ ಹಾಳಾಗಿ ಎಲ್ಲರೂ ತೊಂದರೆ ಪಡಬೇಕಾದಂತಹ ಪರಿಸ್ಥಿತಿ ಬರುತ್ತದೆ. ಆದ್ದರಿಂದ ಎಲ್ಲರೂ ಮಾದಕ ವಸ್ತುಗಳ ಸೇವನೆಯಿಂದ ದೂರವಿರಬೇಕು ಎಂದರು.

ವಿದ್ಯಾರ್ಥಿನಿಯರು ಮಾದಕ ಸೇವನೆ ವಿರುದ್ಧದ ಫಲಕಗಳನ್ನು ಹಿಡಿದು ಕೋಡಿಕೊಪ್ಪ ಗ್ರಾಮದಲ್ಲಿ ಘೋಷಣೆಗಳನ್ನು ಕೂಗುತ್ತ ಜನಜಾಗೃತಿ ಜಾಥಾ ನಡೆಸಿದರು. ಈ ಸಂದರ್ಭದಲ್ಲಿ ಎ.ಟಿ. ಮಳ್ಳಳ್ಳಿ, ಎಂ.ಎಸ್. ಅತ್ತಾರ, ಬಿ.ಡಿ. ಯರಗೊಪ್ಪ, ಕೆ.ಸಿ. ಜೋಗಿ, ಎಸ್. ಶಿವಮೂರ್ತಿ, ಎಸ್. ಸಂಶಿ ಹಿರೇಮಠ, ಶಿಕ್ಷಕಿಯರಾದ ಎಸ್. ಎಫ್. ಧರ್ಮಾಯತ, ಆರ್.ಎಂ. ಗುಳಬಾಳ, ಜ್ಯೋತಿ ಪೂಜಾರ ಹಾಗೂ ಪ್ರಶಿಕ್ಷಣಾರ್ಥಿಗಳು ಪಾಲ್ಗೊಂಡಿದ್ದರು.

## ಸೇನೆಗೆ ಆಯ್ಕೆ: ಆಕಾಶ ಕವಡಿಮಟ್ಟಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಬೆಟಗೇರಿಯ ಕವಡಿಮಟ್ಟಿ ಕುಟುಂಬದ ಆಕಾಶ ಬಸವರಾಜ ಕವಡಿಮಟ್ಟಿ ಸತತ ಪ್ರಯತ್ನ ಹಾಗೂ ಶ್ರಮದಿಂದ ಸೇನೆಗೆ ಆಯ್ಕೆಯಾಗಿರುವ ಪ್ರಯುಕ್ತ ವಾರ್ಡ್ ನಂ.7ರ ಹಬೀಬಗಲ್ಲಿ ಹಾಗೂ ಕೋಚಿಗಲ್ಲಿ ಭಾಗದ ಶ್ರೀ ಆಂಜನೇಯ ಸದ್ಭಕ್ತ ಮಂಡಳಿ ವತಿಯಿಂದ ಅಭಿನಂದಿಸಿ ಸನ್ಮಾನಿಸಲಾಯಿತು.

ಸನ್ಮಾನ ಸ್ವೀಕರಿಸಿದ ಆಕಾಶ ಬಸವರಾಜ ಕವಡಿಮಟ್ಟಿ ಮಾತನಾಡಿ, ಸೇನೆಯಲ್ಲಿ ಸೇವೆ ಸಲ್ಲಿಸಬೇಕು ಎಂಬ ಆಶಯದೊಂದಿಗೆ ಸತತ ಪ್ರಯತ್ನ ಮಾಡುತ್ತಿದೆ. ಅದಕ್ಕಾಗಿ ಅಧ್ಯಯನ ಹಾಗೂ ಶಾರೀರಿಕ ಸದೃಢತೆಗಾಗಿ ಪ್ರತಿ ದಿನ ಶ್ರಮದಾನವನ್ನು ಮಾಡುತ್ತಿದೆ. ಈ ಸಾಧನೆಗೆ ನಮ್ಮ ಕುಟುಂಬದ ಪ್ರೇರಣೆಯಿದೆ. ಇಂದು ನೀವೆಲ್ಲ ಸೇರಿ ಸನ್ಮಾನಿಸಿರುವುದು ಇನ್ನೂ ಹೆಚ್ಚು ಸೇವೆ ಮಾಡಲು ಆಶೀರ್ವಾದ ಸಿಕ್ಕಂತಾಗಿದೆ ಎಂದರು.

ಈ ಸಂದರ್ಭದಲ್ಲಿ ನಗರಸಭಾ ಸದಸ್ಯ ರಾಘವೇಂದ್ರ ಯಳವತ್ತಿ, ಮುತ್ತಣ್ಣ ಕವಡಿಮಟ್ಟಿ ಸಂದರ್ಭೋಚಿತವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಶ್ರೀ ಆಂಜನೇಯ ಸದ್ಭಕ್ತ ಮಂಡಳಿಯ ಎಲ್ಲ ಸದಸ್ಯರು, ಹಿರಿಯರು ಉಪಸ್ಥಿತರಿದ್ದರು.

### ಸಿದ್ಧಾಂತ ಶಿಖಾಮಣಿ ಆಧ್ಯಾತ್ಮಿಕ ಪ್ರವಚನ ಮಾಲಿಕೆಯಲ್ಲಿ ಕಾಶೀ ಶ್ರೀಗಳ ಅಭಿಮತ

## ಸಿದ್ಧಾಂತ ಶಿಖಾಮಣಿ ಜಾಗತಿಕ ಧರ್ಮಗ್ರಂಥ

■ವಿಜಯಸಾಕ್ಷಿ ಸುದ್ದಿ, ಗದಗ

ಸಮಸ್ತ ಮನುಕುಲಕ್ಕೆ ಉಪದೇಶ ಮಾಡುವ ಗ್ರಂಥ ಸಿದ್ಧಾಂತ ಶಿಖಾಮಣಿ. ಈ ಪವಿತ್ರ ಗ್ರಂಥವನ್ನು ವೀರಶೈವ ಧರ್ಮಗ್ರಂಥ ಎಂದು ಬಣ್ಣಿಸಲಾಗಿದ್ದರೂ ಅದು ವೀರಶೈವರಿಗೆ ಅಷ್ಟೇ ಸೀಮಿತವಾಗಿಲ್ಲ. ಜಗತ್ತಿನ ಎಲ್ಲ ಧರ್ಮಿಯರೂ ಅಧ್ಯಯನ ಮಾಡುವುದರಿಂದ ಇದನ್ನು ಜಾಗತಿಕ ಧರ್ಮಗ್ರಂಥ ಎನ್ನಲಾಗಿದೆ ಎಂದು ಜಂಗಮವಾಡಿಮಠ ವಾರಣಾಸಿ ಕಾಶೀ ಮಹಾಪೀಠದ ಶ್ರೀಮತ್ ಕಾಶೀ ಜ್ಞಾನಸಿಂಹಾಸನಾಧೀಶ್ವರ ಜ. ಡಾ. ಮಲ್ಲಿಕಾರ್ಜುನ ವಿಶ್ವಾರಾಧ್ಯ ಶಿವಾಚಾರ್ಯ ಭಗವತ್ಪಾದಂಗಳವರು ಹೇಳಿದರು.

ಅವರು ರವಿವಾರ ನಗರದ ಗಾಣಿಗ ಭವನದಲ್ಲಿ ಗದಗ-ಬೆಟಗೇರಿ ಶ್ರೀ ಸಿದ್ಧಾಂತ ಶಿಖಾಮಣಿ ಆಧ್ಯಾತ್ಮಿಕ ಪ್ರವಚನ ಸಮಿತಿ ಶ್ರೀಮದ್ ಕಾಶೀ ನೂತನ ಜಗದ್ಗುರುಗಳವರ ಆಷಾಢ ಮಾಸದ ಇಷ್ಟಲಿಂಗ ಮಹಾಪೂಜೆ ಹಾಗೂ ಶ್ರೀ ಸಿದ್ಧಾಂತ ಶಿಖಾಮಣಿ ಆಧ್ಯಾತ್ಮಿಕ ಪ್ರವಚನ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಎಲ್ಲ ಸಿದ್ಧಾಂತಗಳಿಗಿಂತ ಈ ಗ್ರಂಥವು ಮೇಲಿನ ಸ್ತರದಲ್ಲಿ ಇರುವುದರಿಂದ ವೀರಶೈವ ಧರ್ಮದ ಪ್ರಮುಖ ಗ್ರಂಥವೆಂದು ಬಣ್ಣಿಸಲಾಗಿದೆ. ಹೀಗಾಗಿ, ಈ ಗ್ರಂಥವನ್ನು ಎಲ್ಲರೂ ಓದಬೇಕು, ತಿಳಿಯಬೇಕು. ಅದರಂತೆ ಧರ್ಮದ ಹಾದಿಯಲ್ಲಿ ಮುನ್ನಡೆದು ತಮ್ಮ ಜೀವನವನ್ನು ಪಾವನ ಮಾಡಿಕೊಳ್ಳಬೇಕೆಂದರು.



ನೇತೃತ್ವ ವಹಿಸಿದ್ದ ಯಲಬುರ್ಗಾದ ಧರಮುರಡಿ ಹಿರೇಮಠದ ಪೂಜ್ಯ ಬಸವಲಿಂಗ ಶಿವಾಚಾರ್ಯ ಸ್ವಾಮಿಗಳು ಸಂದರ್ಭೋಚಿತವಾಗಿ ಮಾತನಾಡಿದರು. ನರೇಗಲ್ ಹಿರೇಮಠದ ಪೂಜ್ಯ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮಿಗಳು ಶ್ರೀ ಸಿದ್ಧಾಂತ ಶಿಖಾಮಣಿ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು.

ಫಂಡರಪುರದ ಸುಭಾಸ ಸಿದ್ಧರಾಮ ಮಮಾನೆ ಅವರಿಗೆ 'ಧರ್ಮಪ್ರಕಾಶ' ಪ್ರಶಸ್ತಿಯನ್ನು ಹಾಗೂ ಉಡನಕಲ್‌ನ ಸರ್ಕಾರಿ ಪ್ರೌಢಶಾಲೆಯ ಸಂಗೀತ ಶಿಕ್ಷಕ ವೀರಭದ್ರಪ್ಪ ಹಿರೇಬೆನಕಲ್ ಅವರಿಗೆ 'ದಿವ್ಯಾಂಗ ಪ್ರತಿಭಾ ಪುರಸ್ಕಾರ' ನೀಡಿ ಗೌರವಿಸಲಾಯಿತು.

ಭಕ್ತಿಸೇವೆ ವಹಿಸಿಕೊಂಡಿದ್ದ ಪಂಚಾಕ್ಷರಯ್ಯ ಹಿರೇಮಠ, ಲಿಂಗರಾಜ ಶಿಗ್ಲಿಮಠ, ಎಸ್.ಎಸ್. ಮೇಟಿ, ಮರಿಸ್ವಾಮಿ ಹಿರೇಮಠ, ಅನ್ನಪೂರ್ಣ ಗಡಾದ, ಶಾಂತಾ ಹಿರೇಮಠ, ಶಾಂತೇಶ ಅರಮನಿ ದಂಪತಿಗಳನ್ನು ಪೂಜ್ಯರು ಆಶೀರ್ವದಿಸಿದರು ವ್ಹಿ.ಸಿ. ಧನ್ನೂರಹಿರೇಮಠ, ಕೆ.ವ್ಹಿ. ಪಾಟೀಲ, ಉಮೇಶ ಭೂಸ್ತ, ಗುರುಸಿದ್ಧಯ್ಯ ಹಿರೇಮಠ ವೇದಿಕೆಯ ಮೇಲಿದ್ದರು.

ಕಸ್ತೂರಿಬಾಯಿ ಕಮ್ಮಾರ ಅವರಿಂದ ಸಂಗೀತ ಜರುಗಿತು. ಸುರೇಶ ಅಬ್ಬಿಗೇರಿ ಸ್ವಾಗತಿಸಿದರು. ನಿತ್ಯಂ ಯೋಗ ಕೇಂದ್ರದ ಮಹಿಳೆಯರಿಂದ ನೃತ್ಯ ದರ್ಶನ ಜರುಗಿತು. ವ್ಹಿ.ಕೆ. ಗುರುಮಠ ನಿರೂಪಿಸಿ ವಂದಿಸಿದರು.

> ಗುಳೇದಗುಡ್ಡದ ಒಪ್ಪತ್ತೇಶ್ವರ ಮಠದ ಪೂಜ್ಯ ಒಪ್ಪತ್ತೇಶ್ವರ ಮಹಾಸ್ವಾಮಿಗಳು ಮಾತನಾಡಿ, ಎಲ್ಲರೂ ಧರ್ಮದ ಸನ್ಮಾರ್ಗದಲ್ಲಿ ಮುನ್ನಡೆಯಬೇಕು. ಭಾರತೀಯ ಸಂಸ್ಕೃತಿ, ಸಂಸ್ಕಾರವನ್ನು ಪಾಲಿಸುವ ಮೂಲಕ ಮಕ್ಕಳಿಗೂ ಇವುಗಳನ್ನು ರೂಢಿಸಬೇಕು. ಈ ಶರೀರಕ್ಕೆ ಸದ್ಗುಣಗಳ ಸಂಸ್ಕಾರ ನೀಡಿದಲ್ಲಿ ಮೋಕ್ಷ ಪ್ರಾಪ್ತಿಯಾಗಲು ಸಾಧ್ಯ ಎಂದರು.

## ಭಾರತ ರತ್ನ ಸಿಎನ್‌ಆರ್ ರಾವ್ ಜನ್ಮ ದಿನಾಚರಣೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಸ್ಕೂಲ್ ಚಂದನದ ಭಾರತರತ್ನ ಪ್ರೊ. ಸಿಎನ್‌ಆರ್ ರಾವ್ ವಿಜ್ಞಾನ ಕೇಂದ್ರದಲ್ಲಿ ಸೋಮವಾರ ಭಾರತ ರತ್ನ ಸಿಎನ್‌ಆರ್ ರಾವ್ ಅವರ ಜನ್ಮ ದಿನವನ್ನು ಆಚರಿಸಲಾಯಿತು.

ಪ್ರೊ. ಸಿಎನ್‌ಆರ್ ರಾವ್ ಅವರ ಸಾಧನೆಗಳನ್ನು ಮೆಲುಕು ಹಾಕುವದರೊಂದಿಗೆ ಬೆಂಗಳೂರಿನ ಜವಾಹರಲಾಲ್ ನೆಹರು ವೈಜ್ಞಾನಿಕ ಸಂಶೋಧನಾ ಕೇಂದ್ರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಚಂದನದ ವಿದ್ಯಾರ್ಥಿಗಳು ಆನ್‌ಲೈನ್ ಮುಂಖಾತರ ಕಾರ್ಯಕ್ರಮ ವೀಕ್ಷಿಸಿ ರಾವ್‌ರವರಿಗೆ ಜನ್ಮ ದಿನದ ಶುಭ ಕೋರಿದರು. ಸ್ಕೂಲ್ ಚಂದನದಲ್ಲಿ ಪ್ರತಿವರ್ಷ 3 ದಿನಗಳ ವಿಜ್ಞಾನ ವಿಸ್ತೃತ ಕಾರ್ಯಕ್ರಮ ನಡೆಸುತ್ತಿದ್ದು, ಇದರಿಂದ ನಮ್ಮ ಉತ್ತರ ಕರ್ನಾಟಕದ ಜಿಲ್ಲೆಗಳ ಸಾವಿರಾರು ವಿದ್ಯಾರ್ಥಿಗಳಿಗೆ, ಸಂಶೋಧಕರಿಗೆ, ವಿಜ್ಞಾನ ಶಿಕ್ಷಕರಿಗೆ ಅನುಕೂಲವಾಗುತ್ತಿದೆ ಎಂದು ಶಾಲೆಯ ನಿರ್ದೇಶಕರಾದ ಹೆಚ್.ಸಿ. ರಟಗೇರಿ ಹೇಳಿದರು. ಈ ವೇಳೆ ಪ್ರಾಚಾರ್ಯರು, ಶಿಕ್ಷಕರು, ವಿದ್ಯಾರ್ಥಿಗಳು ಇದ್ದರು.

## ನಿಮ್ಮ ವ್ಯಕ್ತಿತ್ವವನ್ನು ದೇಶದ ಅಭಿವೃದ್ಧಿಗೆ ಉಪಯೋಗಿಸಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ವ್ಯಕ್ತಿ ತನ್ನಲ್ಲಿ ಏನಾದರೂ ವಿಶೇಷತೆಯನ್ನು ಹೊಂದಿದಾಗ ಅವನಲ್ಲಿನ ವ್ಯಕ್ತಿತ್ವ ವಿಕಸನವಾಗುತ್ತದೆ. ಈ ವ್ಯಕ್ತಿತ್ವವನ್ನು ವಿಕಸನಗೊಳಿಸಿಕೊಳ್ಳಬೇಕಾದರೆ ವ್ಯಕ್ತಿಯು ಅಂತರಂಗದಿಂದಲೇ ವಿಕಸನ ಹೊಂದಬೇಕು. ತನ್ನಲ್ಲಿ ಏನು ಸಾಮರ್ಥ್ಯವಿದೆ ಎಂಬುದನ್ನು ತಿಳಿದು ಅದನ್ನು ಬೆಳೆಸಿ ಜಗದ್ವಿಖ್ಯಾತನಾಗುವತ್ತ ವ್ಯಕ್ತಿ ಗಮನ ಹರಿಸಬೇಕು. ತನಗೆ ದೊರೆತ ತನ್ನ ವ್ಯಕ್ತಿತ್ವವನ್ನು ದೇಶದ ಅಭಿವೃದ್ಧಿಗೆ ಉಪಯೋಗಿಸಬೇಕೆಂದು ಹುಲಕೋಟಿ ಸರಕಾರಿ ಪದವಿ ಕಾಲೇಜಿನ ಪ್ರಾಚಾರ್ಯೆ ಸುಧಾ ಕೌಜಗೇರಿ ಹೇಳಿದರು.



ಪಟ್ಟಣದ ಶ್ರೀ ಅನ್ನದಾನೇಶ್ವರ ಶಿವಾನುಭವ ಮಂಟಪದಲ್ಲಿ ನಡೆದ ಶಿವಾನುಭವಗೋಷ್ಠಿಯಲ್ಲಿ 'ವ್ಯಕ್ತಿತ್ವ ವಿಕಸನ ಮತ್ತು ಯುವ ಜನಾಂಗ' ವಿಷಯ ಕುರಿತು ಮಾತನಾಡಿದರು.

ಸಾಧನೆ, ವ್ಯಕ್ತಿತ್ವ ಒಮ್ಮೆಲೇ ಸಾಧಿಸುವಂತಹುದಲ್ಲ. ಅದಕ್ಕೆ ಸತತ ಪರಿಶ್ರಮ, ಶ್ರದ್ಧೆ, ಪ್ರಾಮಾಣಿಕ ಪ್ರಯತ್ನ ಬೇಕು. ಒಮ್ಮೆ ಸಾಧನೆಯ ಶಿಖರವನ್ನೇರಿದರೆ ಎಂದಿಗೂ ಜಂಭ ಪಡಬಾರದು. ಅಹಂಕಾರ ಮನುಷ್ಯನನ್ನು ಅಧಃಪತನಕ್ಕೆ ತಳ್ಳುತ್ತವೆ. ಭೌತಿಕ ಸಾಧನೆಗಿಂದ ಆಧ್ಯಾತ್ಮಿಕ ಮತ್ತು ಜ್ಞಾನದ ಸಾಧನೆಗೆ ಹೆಚ್ಚಿನ ಗಮನ ನೀಡಬೇಕು. ನಮ್ಮೊಳಗಿನ ಶಕ್ತಿಯನ್ನು ಉದ್ದೀಪನ ಮಾಡಿಕೊಂಡು ಮುನ್ನಡೆದಾಗ ನಮ್ಮಲ್ಲಿನ ವ್ಯಕ್ತಿತ್ವ ತಾನೇ ತಾನಾಗಿ ಅರಳುತ್ತದೆ ಎಂದರು.

ದಿವ್ಯ ಸಾನ್ನಿಧ್ಯ ವಹಿಸಿದ್ದ ಜ. ಮುಪ್ಪಿನ ಬಸವಲಿಂಗ ಸ್ವಾಮೀಜಿ ಆಶೀರ್ವಚನ ನೀಡಿ, ವ್ಯಕ್ತಿ ತನ್ನನ್ನು ತಾನು ಯಾವುದಾದರೊಂದು ತತ್ವಕ್ಕೆ ಅಳವಡಿಸಿಕೊಂಡಾಗ ಅವನಲ್ಲಿ ವ್ಯಕ್ತಿತ್ವ ವಿಕಸನವಾಗಲು ಶುರುವಾಗುತ್ತದೆ. ಅದೆಷ್ಟೇ ಕಷ್ಟ ಬಂದರೂ ತಾನು ನಂಬಿರುವ ತತ್ವವನ್ನು ಕೈಬಿಡದೆ ಮುನ್ನಡೆಸಿಕೊಂಡು ಹೋದರೆ ಅವನಿಗೆ ಯಶಸ್ಸು ಕಟ್ಟಿಟ್ಟ ಬುತ್ತಿ. ಆಗ ಜಗತ್ತು ಅವನನ್ನು ಹಾಡಿಹೊಗಳುತ್ತದೆ. ಈ ಕುರಿತ ಅನೇಕ ವಿಷಯಗಳನ್ನು ಪ್ರಾಚಾರ್ಯೆ ಸುಧಾ ತಮ್ಮ ಉಪನ್ಯಾಸದಲ್ಲಿ ಸಾಕಷ್ಟು ತಿಳಿಸಿದ್ದಾರೆ. ಅವುಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಲು ಪ್ರಯತ್ನಿಸಿ ಎಂದರು.

ವೇದಿಕೆಯ ಮೇಲೆ ಸಂಸ್ಥೆ ಆಡಳಿತಾಧಿಕಾರಿ ಎನ್.ಆರ್. ಗೌಡರ, ಡಾ. ಆರ್.ಎಂ. ನಾಯಕರ, ಡಾ. ಎಲ್.ಎಸ್. ಗೌರಿ ಉಪಸ್ಥಿತರಿದ್ದರು. ಮುಖ್ಯ ಶಿಕ್ಷಕ ಎಸ್.ಎನ್. ಹೊಲಗೇರಿ ಸ್ವಾಗತಿಸಿ ನಿರೂಪಿಸಿದರು. ಉಪನ್ಯಾಸಕ ದೊಡ್ಡಮನಿ ವಂದಿಸಿದರು.

## ಸಾಧನೆಗೆ ಸತತ ಪ್ರಯತ್ನ ಬೇಕು




■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪ್ರತಿಯೊಬ್ಬ ವಿದ್ಯಾರ್ಥಿಗಳಲ್ಲಿಯೂ ಸಾಧನೆ ಮಾಡಬೇಕೆಂಬ ಛಲ, ಸತತ ಪ್ರಯತ್ನ ಇರಬೇಕು ಎಂದು ಗದಗ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದ ಕಾರ್ಯದರ್ಶಿ ಸುಭಾಷ ಬೆಟದೂರ ಹೇಳಿದರು.

ಅವರು ಪಟ್ಟಣದ ಸರಕಾರಿ ಪ್ರೌಢಶಾಲೆ (ಆರ್‌ಎಂಎಸ್‌ಎ) ಯಲ್ಲಿ 2024/25ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಮಾತನಾಡಿದರು.

ವಿದ್ಯಾರ್ಥಿ ಜೀವನದಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಅತ್ಯಂತ ಪ್ರಮುಖ ಘಟ್ಟವಾಗಿದ್ದು, ಈ ಸಮಯದಲ್ಲಿ ವಿದ್ಯಾರ್ಥಿಗಳು ಗುರುಗಳು ಹೇಳುವ ಪ್ರತಿಯೊಂದು ವಿಷಯವನ್ನು ಗಮನವಿಟ್ಟು ಕಲಿಯಬೇಕು, ಸತತ ಪ್ರಯತ್ನಶೀಲರಾಗಿರಬೇಕು. ಮಕ್ಕಳಲ್ಲಿ ಆತ್ಮವಿಶ್ವಾಸ, ಗುರಿ ಮುಟ್ಟುವ ಛಲ ಹೊಂದಿದಾಗ ಸಾಧನೆ ಸುಲಭವಾಗುತ್ತದೆ ಎಂದರು.

ಪ್ರಧಾನ ಗುರು ಎಸ್.ಎಚ್. ಪೂಜಾರ ಮಾತನಾಡಿ, ಬಿ.ಜಿ. ಅಣ್ಣಿಗೇರಿ ಗುರುಗಳು ತಮ್ಮ ಜೀವನವನ್ನು ಬಡ ಮಕ್ಕಳ ಶಿಕ್ಷಣಕ್ಕಾಗಿ ಮೀಸಲಿಟ್ಟಿದ್ದರು. ಇಂತಹ ಗುರುಗಳು ಹಾಕಿಕೊಟ್ಟ ಮಾರ್ಗದಲ್ಲಿ ಸಾಗಿದಾಗ ಸಾಧನೆಯ ಶಿಖರವನ್ನು ಏರಲು ಸಾಧ್ಯವಾಗುತ್ತದೆ ಎಂದರು. ಅಧ್ಯಕ್ಷತೆಯನ್ನು ಮಾಹಾದೇವಪ್ಪಾ ಮಾನೇಗಾರ ವಹಿಸಿದ್ದರು. ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರಗೌಡ ಪಾಟೀಲ, ಶಿವಾನಂದ ಕತ್ತಿ, ಜಿ.ಎಂ. ಪಿರಂಗಿ, ನೇಹಾ, ಸುಧಾರಾಣಿ, ವೀರೇಶ ಗಂಜಿ, ನೂರಹ್ಮದ ನದಾಫ್, ಗೀತಾ ಪಾಟೀಲ, ವಿ.ಟಿ. ಅಂಗಡಿ, ಎಲ್.ಡಿ. ರಾಠೋಡ, ಎಸ್.ವಿ. ತಿಮ್ಮಾಪೂರ, ಜಿ.ಆರ್. ಕುಂದರಗಿ, ಬಸವರಾಜ ಗೌರಿಮನಿ ಇದ್ದರು.

## ಕಾರಣ ನೀಡದೇ ಹಣ ಮಂಜೂರು ಮಾಡಿ

▶▶ಮೊದಲನೇ ಪುಟದಿಂದ

ಯಾವುದೇ ಸುಳ್ಳು ಕಾರಣಗಳನ್ನು ನೀಡದೇ ಹಣವನ್ನು ಮಂಜೂರು ಮಾಡಲು ಮಹಿಳಾ ಮತ್ತು ಮಕ್ಕಳ ಇಲಾಖೆ ಅಧಿಕಾರಿಗಳಿಗೆ ಆದೇಶ ನೀಡಬೇಕೆಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಸ್ಲಂ ಮಹಿಳಾ ಸಮಿತಿ ಮುಖಂಡರಾದ ಮೆಹರುನಿಸಾ ಡಂಬಳ, ಪ್ರೇಮಾ ಮಣ್ಣವಡ್ಡರ, ಮೈಮುನ ಬೈರಕದಾರ, ಮೆಹರುನಿಸಾ ಢಾಲಾಯತ, ಚಂದ್ರವ್ವ ಬಿಂಕದಕಟ್ಟಿ, ಲಕ್ಷ್ಮೀ ಮಣ್ಣವಡ್ಡರ, ನಜಮುನಿಸಾ ಮುರಗೋಡ, ಉಮಾ ಬಡಿಗೇರ, ಜುಬೇದಾ ಯಾದಗೇರಿ ಮುಂತಾದವರು ಉಪಸ್ಥಿತರಿದ್ದರು.



**ಗದಗ:** ಗದಗ ಜಿಲ್ಲಾ ಪ್ರಧಾನ ಕೌಟುಂಬಿಕ ನ್ಯಾಯಾಲಯದ ನ್ಯಾಯಾಧೀಶರಾಗಿದ್ದ ಕಾಶೀಂ ಚೂರಿಖಾನ್ ಇವರ ನಿವೃತ್ತಿ ಹಿನ್ನೆಲೆಯಲ್ಲಿ ಜಿಲ್ಲಾ ನೋಟರಿ ಸಂಘದಿಂದ ಬೀಳ್ಕೊಡುಗೆ ಮತ್ತು ಸನ್ಮಾನ ಕಾರ್ಯಕ್ರಮ ನಡೆಯಿತು.

ಈ ಸಂದರ್ಭದಲ್ಲಿ ನೋಟರಿಗಳಾದ ಕೆ ಪಿ ಕೋಟಿಗೌಡ್ರ, ಎಂ ಎಂ ಹಿರೇಮಠ, ಎಂ ಎ ಸಂಗನಾಳ, ಎಸ್ ಕೆ ನದಾಫ್ ಹಾಗೂ ಬಿ ಎಚ್ ಮಾಡಲಗೇರಿ ಸೇರಿದಂತೆ ಇತರರು ಇದ್ದರು.

## ಹಿರೇಹಂದಿಗೋಳದಲ್ಲಿ ಗ್ರಂಥಾಲಯ ಉದ್ಘಾಟನೆ

■ವಿಜಯಸಾಕ್ಷಿ ಸುದ್ದಿ, ಗದಗ

ಜ್ಞಾನ ದೇಗುಲವಾಗಿರುವ ಗ್ರಂಥಾಲಯ ನಮ್ಮ ಹಿರೇಹಂದಿಗೋಳ ಗ್ರಾಮದಲ್ಲಿ ಪ್ರಾರಂಭವಾಗುತ್ತಿರುವುದು ನನಗೆ ಹಾಗೂ ವಿದ್ಯಾರ್ಥಿಗಳಿಗೆ, ಗ್ರಂಥಾಲಯ ಪ್ರೇಮಿಗಳಿಗೆ ಬಹಳಷ್ಟು ಖುಷಿ ತಂದಿದೆ ಎಂದು ಬಿಂಕದಕಟ್ಟಿ ಗ್ರಾಮ ಪಂಚಾಯಿತಿ ಅಧ್ಯಕ್ಷ ನಿಂಗಪ್ಪ ಪರಪ್ಪನವರು ಹೇಳಿದರು.

ಅವರು ಬಿಂಕದಕಟ್ಟಿ ಗ್ರಾಪಂ ವ್ಯಾಪ್ತಿಯ ಹಿರೇಹಂದಿಗೋಳ ಗ್ರಾಮದಲ್ಲಿ ಉಪಗ್ರಂಥಾಲಯ ಉದ್ಘಾಟಿಸಿ ಮಾತನಾಡಿ, ನಮ್ಮೂರಲ್ಲಿ ಗ್ರಂಥಾಲಯದ ಅವಶ್ಯಕತೆಯಿತ್ತು. ಅದು ಓದುಗರ ಬಹುದಿನಗಳ ಬೇಡಿಕೆಯಾಗಿತ್ತು. ಆ ಕನಸು ಈಗ ನನಸಾಗಿದೆ. ಪ್ರತಿಯೊಬ್ಬರು ಅದರಲ್ಲೂ ವಿದ್ಯಾರ್ಥಿಗಳು ಈ ಗ್ರಂಥಾಲಯದ ಸೌಲಭ್ಯವನ್ನು ಸದುಪಯೋಗ ಪಡಿಸಿಕೊಳ್ಳಬೇಕೆಂದು ಹೇಳಿದರು.



ಈ ಸಂದರ್ಭದಲ್ಲಿ ಗದಗ ತಾ.ಪಂ ಮಾಜಿ ಅಧ್ಯಕ್ಷ ಎಂ.ಐ. ಪಾಟೀಲ, ಬಿಂಕದಕಟ್ಟಿ ಗ್ರಾ.ಪಂ ಸದಸ್ಯ ಅಶೋಕ್ ಕರೂರ, ಸದಸ್ಯ ಡಿ.ಬಿ. ಕರಿಗೌಡ್ರ, ಎಮ್.ಎಚ್. ಮಡಿಕೇರಿ, ಬಿಂಕದಕಟ್ಟಿ ಗ್ರಾ.ಪಂ ಅಭಿವೃದ್ಧಿ ಅಧಿಕಾರಿ ಆರ್.ಎಂ. ಕಿರೇಸೂರು ಗ್ರಂಥಾಲಯದ ಮಹತ್ವ ಕುರಿತು ಮಾತನಾಡಿದರು.

ವೇದಿಕೆಯ ಮೇಲೆ ಬಿಂಕದಕಟ್ಟಿ ಗ್ರಾ.ಪಂ ಸದಸ್ಯೆ ಗಂಗವ್ವ ತಡಸಿ, ಉಪಾಧ್ಯಕ್ಷೆ ದ್ಯಾಮವ್ವ ಆರಟ್ಟಿ, ಎಸ್‌ಡಿಎಮ್‌ಸಿ ಅಧ್ಯಕ್ಷ ನಿಂಗಪ್ಪ ತಳವಾರ, ಮಹಾದೇವಪ್ಪ ಚುರ್ಚಿಹಾಳ, ಶಿವಪುತ್ರಯ್ಯ ಯಲಬುರ್ಗಿಮಠ, ಎಸ್.ಎನ್. ಪಾಟೀಲ, ಆರ್.ಎಚ್. ಪಾಟೀಲ, ಮಲ್ಲನಗೌಡ ಗುರನಗೌಡ್ರ, ವಿರೂಪಾಕ್ಷಿಗೌಡ್ರು ತಡಸಿ, ದುರ್ಗಪ್ಪ ದಾಸಣ್ಣವರ, ಜಕ್ಕನಗೌಡ ಜಕ್ಕನಗೌಡ್ರ ಈಶ್ವರಗೌಡ ತಡಸಿ, ಎಸ್.ಬಿ. ಕುರ್ತಕೋಟಿ, ಶಂಕರಗೌಡ ಹುಲ್ಲೂರು, ಮುತ್ತಣ್ಣ ಹೂಗಾರ ಮತ್ತಿತರರು ಉಪಸ್ಥಿತರಿದ್ದರು. ಮಲ್ಲೇಶಪ್ಪ ಮಡಿಕೇರಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

## ನಾಳೆ ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಗದಗ ಇವರ ಸಹಯೋಗದಲ್ಲಿ ಡಾ.ಫ.ಗು.ಹಳಕಟ್ಟಿಯವರ ಜನ್ಮದಿನದ ನಿಮಿತ್ತ ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆಯನ್ನು ಜುಲೈ 2 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಶ್ರೀ ಜಗದ್ಗುರು ತೋಂಟದಾರ್ಯ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಳ್ಳಲಾಗಿದೆ. ಎಡೆಯೂರು ಶ್ರೀ ಜಗದ್ಗುರು ತೊಂಟದಾರ್ಯ ಸಂಸ್ಥಾನ ಮಠದ ಜಗದ್ಗುರು ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸುವರು. ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ , ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್, ಶಾಸಕರಾದ ಸಿ.ಸಿ.ಪಾಟೀಲ, ಡಾ.ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಬಿ.ಬಿ.ಅಸೂಟಿ ಆಗಮಿಸುವರು.

ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯ ಸ್ವಾಮಿ ಬಿ ಸರ್ವರಿಗೂ ಸ್ವಾಗತ ಕೋರಿದ್ದಾರೆ.

## ನಿಧನ

### ಶಂಕ್ರವ್ವ ಶಿವಲಿಂಗಪ್ಪ ಮೇಟಿ



**ರೋಣ:** ತಾಲೂಕಿನ ಮಾರನಬಸರಿ ಗ್ರಾಮದ ಶಂಕ್ರವ್ವ ಶಿವಲಿಂಗಪ್ಪ ಮೇಟಿ (87) ರವಿವಾರ ಬೆಳಗಿನ ಜಾವ ನಿಧನರಾದರು. ಮೃತರು ಇಬ್ಬರು ಪುತ್ರರು, ಮೂವರು ಪುತ್ರಿಯರು ಸೇರಿದಂತೆ ಅಪಾರ ಬಳಗವನ್ನು ಅಗಲಿದ್ದಾರೆ.

ಸಂತಾಪ: ನಿಡಗುಂದಿಕೊಪ್ಪ ಶ್ರೀಮಠದ ಅಭಿನವ ಚೆನ್ನಬಸವ ಶ್ರೀಗಳು, ಶಿದ್ದನಕೊಳ್ಳದ ಡಾ. ಶಿವಕುಮಾರ ಶ್ರೀಗಳು, ಮಾಜಿ ಸಚಿವ ಕಳಕಪ್ಪ ಬಂಡಿ, ಗ್ರಾ.ಪಂ ಅಧ್ಯಕ್ಷ-ಉಪಾಧ್ಯಕ್ಷರು, ಸದಸ್ಯರು ಸೇರಿದಂತೆ ಗ್ರಾಮದ ಮುಖಂಡರು ಸಂತಾಪ ಸೂಚಿಸಿದ್ದಾರೆ.

## ಬೆಸ್ಕಾಂ ವತಿಯಿಂದ ಜಾಗೃತಿ ಜಾಥಾ

■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ವಿದ್ಯುತ್ ಬಗ್ಗೆ ಸಾರ್ವಜನಿಕರು ವಹಿಸಬೇಕಾದ ಸುರಕ್ಷತಾ ಕ್ರಮಗಳ ಬಗ್ಗೆ ಹರಪನಹಳ್ಳಿ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಬೆಸ್ಕಾಂ ವತಿಯಿಂದ ಕಾಲ್ನಡಿಗೆ ಜಾಥ ಹಮ್ಮಿಕೊಳ್ಳಲಾಗಿತ್ತು.

ಸಾರ್ವಜನಿಕರು ತಮ್ಮ ನಿವಾಸ ಅಥವಾ ಇತರೆ ಕಟ್ಟಡಗಳನ್ನು ವಿದ್ಯುತ್ ತಂತಿಗಳ ಸಮೀಪ ನಿರ್ಮಿಸದೆ ಸೂಕ್ತ ಅಂತರವಿರಬೇಕು ಹಾಗೂ ಮಳೆಗಾಲದಲ್ಲಿ ತುಂಡಾಗಿ ಬಿದ್ದ ವಿದ್ಯುತ್ ತಂತಿಗಳನ್ನು ಮುಟ್ಟದೆ ತಕ್ಷಣವೇ ಬೆವಿಕಾಂ ಸಹಾಯವಾಣಿ-1912ಕ್ಕೆ ಕರೆ ಮಾಡಬೇಕು ಎಂದು ಸೂಚಿಸಲಾಯಿತು.



ವಿದ್ಯುತ್ ಕಂಬಗಳಿಗೆ ಬಟ್ಟೆಗಳನ್ನು ಒಣಗಿಸಲು ವಿದ್ಯುತ್ ತಂತಿಗಳನ್ನು ಕಟ್ಟಬಾರದು. ವಿದ್ಯುತ್ ತಂತಿ ಹಾದು ಹೋದ ಜಾಗದಲ್ಲಿ ಮರದ ರೆಂಬೆ-ಕೊಂಬೆಗಳನ್ನು ನೇರವಾಗಿ ಕಡಿಯದೆ ಬೆವಿಕಾಂ ಸಿಬ್ಬಂದಿಗಳಿಗೆ ಮಾಹಿತಿ ನೀಡಬೇಕು. ತಂತಿ ಬೇಲಿಗಳಿಗೆ ವಿದ್ಯುತ್ ಹಾಯಿಸಬಾರದು ಹಾಗೂ ಬೆವಿಕಾಂ ಲೈನ್‌ನಿಂದ ಅಕ್ರಮವಾಗಿ ವಿದ್ಯುತ್ ಸಂಪರ್ಕವನ್ನು ಪಡೆಯದಿರಲು ಸೂಚಿಸಲಾಯಿತು.

ಈ ವೇಳೆ ಎಇಇ ಪ್ರಕಾಶ್ ಪತ್ತೆನೂರು, ಜೆಇ ಕೆ.ಎಂ. ಬಸವರಾಜ್, ಸಿಬ್ಬಂದಿಗಳಾದ ಪೋರಪ್ಪ, ಕರಿಬಸಪ್ಪ, ಎಲ್.ಎಸ್. ಮಣಿನಾಯ್ಕ, ಎನ್. ತಿಪ್ಪಯ್ಯ ಸ್ವಾಮಿ ಬಾಗಳಿ, ಎಂ. ಈರಣ್ಣ, ಕೆ. ಬಾಬು, ಎಂ. ಕೊಟ್ರಪ್ಪ, ಶರಣಬಸವ, ಪಾಂಡ್ಯಾನಾಯ್ಕ, ಅನಿತಾ, ಎಸ್.ಕೆ. ಜ್ಯೋತಿ, ವಿ. ವೀರೇಶ, ಟಿ. ಕಿರಣ್, ಹೆಚ್. ರಾಮಚಂದ್ರ ಮುಂತಾದವರಿದ್ದರು.

## ಗೋ ರಕ್ಷಕರ ಮೇಲಿನ ಹಲ್ಲೆಗೆ ಖಂಡನೆ



■ **ವಿಜಯಸಾಕ್ಷಿ ಸುದ್ದಿ, ಗದಗ**

ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲೂಕಿನ ಇಂಗಳಿ ಗ್ರಾಮದಲ್ಲಿ ಗೋ ರಕ್ಷಣೆಗೆ ಹೋದ ನಾಲ್ವರು ಗೋ ಭಕ್ತರನ್ನು ಗ್ರಾಮದ ಕೆಲವು ಮತಾಂಧ ಮುಸ್ಲಿಂ ಗೂಂಡಾಗಳು ರಾಕ್ಷಸರಂತೆ ವರ್ತಿಸಿ ತೆಂಗಿನಮರಕ್ಕೆ ಕಟ್ಟಿಹಾಕಿ ಅಮಾನುಷವಾಗಿ ಹೊಡೆದು ಕೊಲೆ ಮಾಡಲು ಪ್ರಯತ್ನಿಸಿದ್ದಾರೆ. ಕೂಡಲೇ ಅವರನ್ನು ಬಂಧಿಸಿ ಉಗ್ರ ಶಿಕ್ಷೆ ನೀಡಬೇಕು ಎಂದು ಆಗ್ರಹಿಸಿ ಶ್ರೀರಾಮ ಸೇನೆ ಸಂಘಟನೆಯಿಂದ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಯಿತು.

ಗೋ ರಕ್ಷಕರ ಮೇಲಿನ ಹಲ್ಲೆ ನಾಚಿಕೆಗೇಡಿನ ಸಂಗತಿ. ತಕ್ಷಣವೇ ಆ ಮತಾಂಧರನ್ನು ಬಂಧಿಸಿ ಉಗ್ರ ಕ್ರಮ ಕೈಗೊಳ್ಳಬೇಕು. ಇಲ್ಲದ್ದಿದ್ದರೆ ಎಲ್ಲ ಹಿಂದೂ ಸಂಘಟನೆಗಳು ಹಾಗೂ ಗೋ ಭಕ್ತರು ಇಂಗಳಿ ಗ್ರಾಮಕ್ಕೆ ತೆರಳಿ ಜಿಹಾದಿಗಳಿಗೆ ತಕ್ಕ ಪಾಠ ಕಲಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಈ ವೇಳೆ ಮಾತನಾಡಿದ ಮುಖಂಡ ಈಶ್ವರ ಖಾಟವಾ, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಮುಸ್ಲಿಂ ಜಿಹಾದಿಗಳ ಹಾವಳಿ ಹೆಚ್ಚಾಗಿದೆ. ಅವರಿಗೆ ಸರ್ಕಾರದ ಭಯ, ಪೊಲೀಸರ ಭಯ, ಕಾನೂನು ಭಯ ಇಲ್ಲದಂತಾಗಿದೆ. ನಾವು ಏನೇ ಮಾಡಿದರೂ ರಾಜ್ಯ ಸರ್ಕಾರ ನಮ್ಮನ್ನು ರಕ್ಷಿಸುತ್ತದೆ ಎನ್ನುವ ಮನೋಭಾವದಲ್ಲಿ ಬದುಕುತ್ತಿದ್ದಾ-ರೆ. ಮುಂದಿನ ದಿನಮಾನಗಳಲ್ಲಿ ಇಂತಹ ಮತಾಂಧರಿಗೆ ನಾವೇ ತಕ್ಕ ಪಾಠ ಕಲಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು. ಈ ಸಂದರ್ಭದಲ್ಲಿ ಶ್ರೀರಾಮ ಸೇನೆಯ ಕಾರ್ಯಕರ್ತರು ಉಪಸ್ಥಿತರಿದ್ದರು.

### ಜಿಲ್ಲಾ ನೀರು ಮತ್ತು ನೈರ್ಮಲ್ಯ ಮಿಷನ್ (DWSM) ಸಭೆಯಲ್ಲಿ ಜಿ.ಪಂ ಸಿಇಒ ಭರತ್ ಎಸ್

# ಸುಧಾರಿತ ಮಟ್ಟದ ಸ್ವಚ್ಛತೆಗೆ ಕ್ರಮ ವಹಿಸಿ

■ **ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ನೀರು ಮತ್ತು ನೈರ್ಮಲ್ಯ ಮಿಷನ್ (ಡಿಡಬ್ಲ್ಯುಎಸ್‌ಎಂ)ನ ಪಾತ್ರ ಮತ್ತು ಜವಾಬ್ದಾರಿಗಳನ್ನು ಅರಿತುಕೊಂಡು ಅಧಿಕಾರಿಗಳು ಕೆಲಸ ನಿರ್ವಹಿಸಬೇಕು. ಗ್ರಾಮೀಣ ಪ್ರದೇಶದಲ್ಲಿ ಸುಧಾರಿತ ಮಟ್ಟದ ಸ್ವಚ್ಛತೆಗೆ ಕ್ರಮ ವಹಿಸಬೇಕೆಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ತಿಳಿಸಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸೋಮವಾರ ಜರುಗಿದ ಡಿಡಬ್ಲ್ಯುಎಸ್‌ಎಂ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿನ ಗ್ರಾಮಗಳನ್ನು ಓಡಿಎಫ್ + ಮಾದರಿ (ಬಯಲು ಶೌಚ ಮುಕ್ತ) ಗ್ರಾಮಗಳನ್ನಾಗಿ ಮಾಡುವುದು, ಗ್ರಾಮೀಣ ಪ್ರದೇಶಗಳಲ್ಲಿ ಸುಧಾರಿತ ಮಟ್ಟದ ಸ್ವಚ್ಛತೆ ಖಚಿತಪಡಿಸುವುದು, ಕುಡಿಯುವ ನೀರಿನ ಮೂಲಗಳ ಸುಸ್ಥಿರತೆಯ ಕಾಮಗಾರಿಗಳು ಮತ್ತು ಬೂದು ನೀರು ನಿರ್ವಹಣೆಗೆ ಸಂಬಂಧಿಸಿದಂತೆ ವಿವಿಧ ಜವಾಬ್ದಾರಿಗಳನ್ನು ಡಿಡಬ್ಲ್ಯುಎಸ್‌ಎಂ (ಜಿಲ್ಲಾ ನೀರು ಮತ್ತು ನೈರ್ಮಲ್ಯ ಮಿಷನ್) ಹೊಂದಿದೆ. ಕಾರ್ಯಕ್ರಮದ ಅನುಷ್ಟಾನಿತ ಅಧಿಕಾರಿಗಳು ವಿವಿಧ ಇಲಾಖೆಗಳ ಸಮನ್ವಯದೊಂದಿಗೆ ಪರಿಣಾಮಕಾರಿಯಾಗಿ ಕೆಲಸ ನಿರ್ವಹಿಸಬೇಕು.

ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣಾ ಘಟಕಗಳು, ಸ್ವಚ್ಛ ಸಂಕೀರ್ಣ ಘಟಕ, ತ್ಯಾಜ್ಯ ಸಂಗ್ರಹಣೆ ವಾಹನಗಳು, ದ್ರವ ತ್ಯಾಜ್ಯ ನಿರ್ವಹಣೆ ವ್ಯವಸ್ಥೆ, ಮಲ ತ್ಯಾಜ್ಯ ನಿರ್ವಹಣೆ, ಗೋಬರ್ದನ್ ಘಟಕಗಳ ಕ್ರಿಯಾತ್ಮಕತೆ, ಕಾರ್ಯಾಚರಣೆ ಮತ್ತು ಸುಸ್ಥಿರತೆಯ ಮೇಲ್ವಿಚಾರಣೆ, ಪ್ರತಿ ಗ್ರಾಮಗಳಲ್ಲಿ ನೀರಿನ ಗುಣಮಟ್ಟ ಖಚಿತಪಡಿಕೊಳ್ಳುವುದು, ನಿಯಮಿತವಾಗಿ ಗ್ರಾಮ ಮಟ್ಟದ



ಕಾಮಗಾರಿಗಳನ್ನು ವೀಕ್ಷಿಸಿ ಪರಿಶೀಲನೆ ನಡೆಸುವುದರೊಂದಿಗೆ ತಮ್ಮ ತಮ್ಮ ಜವಾಬ್ದಾರಿಗಳನ್ನು ಸಮರ್ಪಕವಾಗಿ ನಿರ್ವಹಿಸಬೇಕೆಂದು ಸೂಚಿಸಿದರು.

ಶಾಲೆ ಹಾಗೂ ಅಂಗನವಾಡಿ ಕೇಂದ್ರಗಳಿಗೆ ನೀರಿನ ಸಂಪರ್ಕ ಇರುವ ಬಗ್ಗೆ ಜಂಟಿ ಸಮೀಕ್ಷೆ ಕೈಗೊಂಡು ವಾರಾಂತ್ಯದಲ್ಲಿ ವರದಿ ಸಲ್ಲಿಸಬೇಕು ಎಂದು ಶಾಲಾ ಶಿಕ್ಷಣ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಿಗೆ ಸೂಚಿಸಿದರು.

DWSM ನ ಸದಸ್ಯ ಕಾರ್ಯದರ್ಶಿಗಳಾದ ಗ್ರಾಮೀಣ ನೀರು ಸರಬರಾಜು ಕಾರ್ಯನಿರ್ವಾಹಕ ಅಭಿಯಂತರ ರಾಘವೇಂದ್ರ ಹೊಸಮನಿ ಮಾತನಾಡಿ, ಸರ್ಕಾರದ ಆದೇಶದನ್ವಯ ರಾಜ್ಯದಲ್ಲಿ ನೀರು ಮತ್ತು ನೈರ್ಮಲ್ಯ ಕಾರ್ಯಗಳ ಒಟ್ಟಾರೆ ಅನುಷ್ಟಾನಕ್ಕಾಗಿ ಮತ್ತು ಪರಿಶೀಲನೆಗಾಗಿ ಡಿಡಬ್ಲ್ಯುಎಸ್‌ಎಂ ರಚಿಸಲಾಗಿದೆ. ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕರಿಗಳು ಸಮಿತಿಯ ಅಧ್ಯಕ್ಷರಾಗಿದ್ದು, ಜಿಲ್ಲಾ ಅರಣ್ಯ, ಬುಡಕಟ್ಟು ಕಲ್ಯಾಣ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಜಿಲ್ಲಾ ನಗರಾಭಿವೃದ್ಧಿ ಕೋಶ, ಜಿಲ್ಲಾ ವೈದ್ಯಾಧಿಕಾರಿ, ಜಿಲ್ಲಾ ಐಸಿಡಿಎಸ್, ಶಾಲಾ ಶಿಕ್ಷಣ ಇಲಾಖೆ, ಜಲ ಸಂಪನ್ಮೂಲ/ಅಂತರ್ಜಲ/ನೀರಾವರಿ, ಕೃಷಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಅಧಿಕಾರಿಗಳು, ಗ್ರಾ.ಪಂ ಅಧ್ಯಕ್ಷರು, ನೀರು ನಿರ್ವಹಣೆ, ಸಮುದಾಯ ಆರೋಗ್ಯ, ಸಮುದಾಯ ಅಭಿವೃದ್ಧಿ ಇತ್ಯಾದಿ ಕ್ಷೇತ್ರಗಳ ಪ್ರಮುಖ್ಯ ವ್ಯಕ್ತಿಗಳು ಸದಸ್ಯರುಗಳಾಗಿರುತ್ತಾರೆ ಎಂದು ಸಭೆಗೆ ವಿವರಿಸಿದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ನಗರಾಭಿವೃದ್ಧಿ ಕೋಶದ ಯೋಜನಾಧಿಕಾರಿ ಬಸನಗೌಡ್ರ ಕೊಟ್ಟೂರ, ಮಕ್ಕಳ ನಿರೂಪಣಾಧಿಕಾರಿ ರಾಧಾ ಮಣ್ಣೂರ, ಜಿ.ಪಂ ಯೋಜನಾ ನಿರ್ದೇಶಕ ಚಳಗೇರಿ, ಶಿಗ್ಲಿ, ಅಂತೂರ ಬೆಂತೂರ ಗ್ರಾ.ಪಂ ಅಧ್ಯಕ್ಷರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ವಸಂತ ಮಡ್ಲೂರ ಸೇರಿದಂತೆ ಕಾರ್ಯಕ್ರಮದ ಅನುಷ್ಟಾನಿತ ಅಧಿಕಾರಿಗಳು ಹಾಜರಿದ್ದರು.

> ಪ್ರತಿ ಗ್ರಾಮದಲ್ಲಿ ನೀರಿನ ಗುಣಮಟ್ಟವನ್ನು ಖಚಿತಪಡಿಸಿಕೊಳ್ಳಲು ಕ್ಲೋರಿನೇಷನ್ ವ್ಯವಸ್ಥೆ ಖಚಿತಪಡಿಸುವುದು ಹಾಗೂ ಯೋಜನೆಗಳ ಅನುಷ್ಟಾನದಲ್ಲಿ ತೊಡಗಿರುವ ವ್ಯಕ್ತಿಗಳ ಸಾಮರ್ಥ್ಯ ವೃದ್ಧಿ, ತರಬೇತುದಾರರಿಗೆ ತರಬೇತಿ, ಅನುಷ್ಟಾನ ಬೆಂಬಲ ಸಂಸ್ಥೆಗಳ (ಐಎಸ್‌ಐ) ಬಳಕೆ, ಸ್ವಯಂ ಸೇವಕರು, ಮಹಿಳಾ ಸ್ವ-ಸಹಾಯ ಗುಂಪುಗಳು ಇತ್ಯಾದಿಗಳನ್ನು ಖಚಿತಪಡಿಸುವುದು. ಯೋಜನೆಗಳಿಗೆ ಸಂಬಂಧಿಸಿದಂತೆ ತಾಲೂಕು ಮತ್ತು ಗ್ರಾಮ ಮಟ್ಟದಲ್ಲಿ ಕಾರ್ಯಾಚರಣೆ ಮತ್ತು ನಿರ್ವಹಣೆ ವ್ಯವಸ್ಥೆಗಳ ಪರಿಣಾಮಕಾರಿ ಅನುಷ್ಟಾನಕ್ಕೆ ಕ್ರಮ ವಹಿಸಬೇಕೆಂದು ಭರತ್ ಎಸ್ ತಿಳಿಸಿದರು.

# ಮೊಹರಂ ಹಬ್ಬವನ್ನು ಶಾಂತಿಯಿಂದ ಆಚರಿಸಿ




■ **ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಜುಲೈ 6ರಂದು ಆಚರಿಸಲಾಗುವ ಮೊಹರಂ ಹಬ್ಬವನ್ನು ಎಲ್ಲರೂ ಶಾಂತಿ, ಸೌಹಾರ್ದತೆಯಿಂದ ಆಚರಿಸಬೇಕೆಂದು ರೋಣ ಸಿಪಿಐ ಎಸ್.ಎಸ್. ಬೀಳಗಿ ಹೇಳಿದರು.

ನರೇಗಲ್ಲ ಪೊಲೀಸ್ ಠಾಣೆಯಲ್ಲಿ ನಡೆದ ಮೊಹರಂ ಶಾಂತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನರೇಗಲ್ಲ ಪಟ್ಟಣ ಮತ್ತು ಹೋಬಳಿ ಎಂದಿಗೂ ಶಾಂತಿಪ್ರಿಯತೆಗೆ ಹೆಸರಾಗಿದೆ. ಇಲ್ಲಿ ಹಿಂದೂ-ಮುಸ್ಲಿಂ ಬಾಂಧವರೆಲ್ಲರೂ ಸೋದರ ಭಾವನೆಯಿಂದ ಬಾಳುತ್ತಿದ್ದು, ಎಲ್ಲರೂ ಸೇರಿ ಹಬ್ಬಗಳನ್ನು ಮಾಡುತ್ತಿರುವುದನ್ನು ಕಂಡು ಆನಂದವಾಗಿದೆ. ಆದ್ದರಿಂದ ಮುಂಬರುವ ಹಬ್ಬವನ್ನು ನೀವೆಲ್ಲರೂ ಸೇರಿ ಬಹಳಷ್ಟು ಸಡಗರ ಸಂಭ್ರಮಗಳಿಂದ ಆಚರಿಸಿರಿ. ಏನಾದರೂ ಅಹಿತಕರ ಘಟನೆಗಳು ಜರುಗಲಿವೆ ಎಂಬ ಸುಳಿವು ನಿಮಗೆ ಸಿಕ್ಕಲ್ಲಿ ನಿಮ್ಮ ಮಟ್ಟದಲ್ಲಿ ನೀವೇ ಬಗೆಹರಿಸಲು ಪ್ರಯತ್ನಿಸಿ, ನಿಮ್ಮ ಕೈಮೀರುವಂತೆ ಕಂಡರೆ ತಕ್ಷಣ ಪೊಲೀಸ್ ಠಾಣೆಗೆ ತಿಳಿಸಿ. ಇದರಿಂದ ಘಟನೆ ನಡೆಯುವ ಪೂರ್ವದಲ್ಲಿಯೆ ತಡೆಯಬಹುದು ಎಂದರು. ಠಾಣಾಧಿಕಾರಿ ಐಶ್ವರ್ಯ ನಾಗರಾಳ ಮಾತನಾಡಿ, ಪ್ರತಿ ಹಬ್ಬದ ಸಂದರ್ಭದಲ್ಲಿಯೂ ಇಲ್ಲಿನ ಹಿರಿಯರು ನೀಡುತ್ತಿರುವ ಸಹಕಾರ ಅಮೋಘವಾಗಿದೆ. ಎಲ್ಲರೂ ಒಮ್ಮನದಿಂದ ಹಬ್ಬಗಳನ್ನು ಆಚರಿಸುವುದರಿಂದ ಯಾವುದೇ ಅಹಿತಕರ ಘಟನೆಗಳಿಗೆ ಇಲ್ಲಿ ಅವಕಾಶ ಇಲ್ಲದಿರುವುದು ನಮ್ಮೆಲ್ಲರ ಸೌಭಾಗ್ಯ. ಇದನ್ನು ಎಲ್ಲರೂ ಹೀಗೇ ಮುನ್ನಡೆಸಿಕೊಂಡು ಹೋಗೋಣ ಎಂದರು. ಸಭೆಯನ್ನುದ್ದೇಶಿಸಿ ನಿವೃತ್ತ ಶಿಕ್ಷಕ ಎ.ಎ. ನವಲಗುಂದ, ಎಂ.ಎಸ್. ದಢೇಸೂರಮಠ, ಚಂದ್ರು ರಾಠೋಡ ಮುಂತಾದವರು ಮಾತನಾಡಿದರು. ಸಭೆಯಲ್ಲಿ ಜಿ.ಎಂ. ನದಾಫ್, ಎಚ್.ಆರ್. ಕೊಪ್ಪಳ, ಕೆ.ಎಚ್. ಅಣ್ಣಿಗೇರಿ, ಖಾದರಭಾಷಾ ಹೂಲಗೇರಿ, ಮೌಲಾಸಾಬ ಬೆಟಗೇರಿ, ರಮೇಶ, ಕೆ.ಎಸ್. ಗಡಾದ, ನಾಗರಾಜ ವಡ್ಡರ, ಎಚ್.ಐ. ದೊಡ್ಡಮನಿ, ಸಿರಾಜ ಹೊಸಮನಿ, ಎಂ.ಬಿ. ಪರಶು, ಮುತ್ತು ಮುದಗಲ್ಲ, ಸಿದ್ದಿಕ್ ದಳವಾಯಿ, ದಾದೇಸಾಬ ಹೊಸಮನಿ, ಎ.ಕೆ. ತಿರ್ಲಾಪೂರ, ರಸೂಲಸಾಬ ಜಕ್ಕಲಿ, ಆರ್.ಆರ್. ಹೊಸಮನಿ, ಠಾಣಾ ಸಿಬ್ಬಂದಿಗಳು ಇದ್ದರು.

# ಸಂಸ್ಕೃತ ಸಂಭಾಷಣಾ ಶಿಬಿರ ಮುಕ್ತಾಯ



■ **ವಿಜಯಸಾಕ್ಷಿ ಸುದ್ದಿ, ಗದಗ**

ಸಂಸ್ಕೃತ ಭಾರತೀ ಗದಗ ಜಿಲ್ಲೆ ಹಾಗೂ ಕಣವಿ ಗ್ರಾಮದ ಹನುಮಂತ ದೇವಸ್ಥಾನದ ಕಮಿಟಿಯ ಬಿ.ಜಿ. ಅಣ್ಣಿಗೇರಿ ಸಂಸ್ಕೃತ ಪಾಠಶಾಲೆಯ ಸಹಯೋಗದಲ್ಲಿ ತೇಜಸ್ವಿನಿ ಕುರ್ತಕೋಟಿ ಅವರು ನಡೆಸಿದ ಉಚಿತ ಸಂಸ್ಕೃತ ಸಂಭಾಷಣಾ ಶಿಬಿರವು ಅಡ್ನೂರ ದಾಸೋಹ ಮಠದ ಪೂಜ್ಯ ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳ ಸಾನ್ನಿಧ್ಯದಲ್ಲಿ ಸಮಾರೋಪಗೊಂಡಿತು.

ಸಂಸ್ಕೃತ ಭಾರತಿಯ ಗದಗ ಜಿಲ್ಲಾ ಸಂಯೋಜಕರು ಹಾಗೂ ಮುಖ್ಯಾಧ್ಯಾಪಕರಾದ ಎಸ್.ಎನ್. ಶಿಂಪಿಗೇರ ಮಾತನಾಡಿ, ಗ್ರಾಮೀಣ ಪ್ರದೇಶದಲ್ಲಿ ಸಂಸ್ಕೃತ ಉಳಿಸಿ ಬೆಳೆಸುತ್ತಿರುವದು ಸಂತಸ ತಂದಿದೆ ಎಂದರಲ್ಲದೆ, ಪೂಜ್ಯ ಶ್ರೀಗಳು ಪೂರ್ವಾಶ್ರಮದಲ್ಲಿ ಸಂಸ್ಕೃತ ಕಲಿತಿದ್ದನ್ನು ಸ್ಮರಿಸಿದರು.

ಪಂಜಾಬ್ ನ್ಯಾಷನಲ್ ಬ್ಯಾಂಕ್ ನಿವೃತ್ತ ಮ್ಯಾನೇಜರ್ ಬಸವರಾಜ ಬಂದಕ್ಕನವರ, ತಾ.ಪಂ ಮಾಜಿ ಅಧ್ಯಕ್ಷ ಎಸ್.ಎಸ್. ಪಾಟೀಲ, ಟ್ರಸ್ಟ್ ಉಪಾಧ್ಯಕ್ಷ ಮಹಾದೇವಪ್ಪ ಬಂದಕ್ಕನವರ, ಕಾರ್ಯದರ್ಶಿ ಕಳಕಪ್ಪ ಕುರ್ತಕೋಟಿ, ಅರುಣ್ ಕಲ್ಲನಗೌಡ್ರು, ಕಲ್ಲಯ್ಯ ಮರೆಣ್ಣವರ, ಆನಂದ ಸ್ವಾಮಿ, ಪರಪ್ಪ ಕೋಳಿವಾಡ, ವಿ.ಟಿ. ಕುರ್ತಕೋಟಿ, ರೇವಣಸಿದ್ದನಗೌಡ ದೊಡ್ಡಗೌಡ್ರ, ಸಂಸ್ಕೃತ ಭಾರತೀ ಗದಗ ನಗರ ಸಂಯೋಜಕ ಮೌನೇಶ್ ಭಜಂತ್ರಿ ಮುಂತಾದವರು ಉಪಸ್ಥಿತರಿದ್ದರು.



ಲಕ್ಷ್ಮೇಶ್ವರದ ದೂದನಾನಾ ದರ್ಗಾದ ಮುಂದುವರೆದ ರಸ್ತೆ ಕಾಮಗಾರಿಯನ್ನು ತಾತ್ಕಾಲಿವಾಗಿ ನಿಲ್ಲಿಸುವಂತೆ ಒತ್ತಾಯಿಸಿ ಸಾರ್ವಜನಿಕರು ಜೆಸಿಬಿ ಮೇಲೆ ಹತ್ತಿ ಪ್ರತಿಭಟಿಸಿದರು. ಇದೇ ರಸ್ತೆಯ ಕಾಮಗಾರಿ ತಿಂಗಳುಗಳಿಂದ ಅರ್ಧಕ್ಕೆ ನಿಂತು ಸಂಚಾರಕ್ಕೆ ಪರದಾಡುವಂತಾಗಿದೆ. ಈಗ ಮತ್ತೆ ಮುಂದುವರೆದ ಕಾಮಗಾರಿಗೆ ರಸ್ತೆ ಅಗೆಯುವುದು ಬೇಡ. ಮೊಹರಂ ಹಬ್ಬವೂ ಇದ್ದು, ರೈತರು, ವಿದ್ಯಾರ್ಥಿಗಳು ಸೇರಿ ಸಾರ್ವಜನಿಕರು ಈಗಾಗಲೇ ಸುಸ್ತಾಗಿದ್ದಾರೆ. ಅರ್ಧಕ್ಕೆ ನಿಂತಿರುವ ಕಾಮಗಾರಿ ಪೂರ್ಣಗೊಳಿಸಿ ಮುಂದುವರೆದ ಕಾಮಗಾರಿ ಪ್ರಾರಂಭಿಸಿ ಎಂದು ಆಗ್ರಹಿಸಿದರು. ಸಾರ್ವಜನಿಕರ ಒತ್ತಾಯಕ್ಕೆ ಕಾಮಗಾರಿಯನ್ನು ಅಲ್ಲಿಗೆ ಕೈಬಿಟ್ಟು ಕೆಲಸಗಾರರು ಅಲ್ಲಿಂದ ತೆರಳಿದರು.

# ರಾಷ್ಟ್ರೀಯ ಫ್ಲೋರೊಸಿಸ್ ಜಾಗೃತಿ ಕಾರ್ಯಕ್ರಮ

■ **ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಫ್ಲೋರೈಡ್ ಅಂಶ ಹೆಚ್ಚಾಗಿರುವ ಆಹಾರ ಹಾಗೂ ನೀರು ಸೇವನೆಯಿಂದ ಫ್ಲೋರೋಸಿಸ್ ಕಾಯಿಲೆ ಬರುತ್ತದೆ. ಇದನ್ನು ತಡೆಗಟ್ಟುವುದು ಅತ್ಯಂತ ಅವಶ್ಯಕ ಎಂದು ಜಿಲ್ಲಾ ಫ್ಲೋರೋಸಿಸ್ ಪ್ರಯೋಗ ಶಾಲಾ ತಂತ್ರಜ್ಞ ಎಸ್.ಕೆ. ಚೌಡಣ್ಣವರ ಹೇಳಿದರು.

ಸಮೀಪದ ಬೂದಿಹಾಳ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ



ಕಲ್ಯಾಣ ಇಲಾಖೆಯ ಸಹಯೋಗದಲ್ಲಿ ನಡೆದ ರಾಷ್ಟ್ರೀಯ ಫ್ಲೋರೋಸಿಸ್ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಫ್ಲೋರೈಡ್ ನಮ್ಮ ದೇಹಕ್ಕೆ ಅಗತ್ಯವಿರುವ ಖನಿಜಾಂಶ. ನಾವು ಸೇವಿಸುವ ಆಹಾರ ಮತ್ತು ಕುಡಿಯುವ ನೀರಿನಲ್ಲಿ ಅವಶ್ಯಕತೆಗಿಂತ ಹೆಚ್ಚು ಫ್ಲೋರೈಡ್ ಇದ್ದರೆ ಫ್ಲೋರೋಸಿಸ್ ಉಂಟಾಗಿ ದಂತ ಫ್ಲೋರೋಸಿಸ್, ಮೂಳೆ ಫ್ಲೋರೋಸಿಸ್ ಕಾಣಿಸಿಕೊಳ್ಳುತ್ತದೆ. ಫ್ಲೋರೋಸಿಸ್ ಹಲ್ಲುಗಳ ದಂತ ಕವಚದ ಮೇಲೆ ಹೆಚ್ಚು ಪರಿಣಾಮ ಬೀರುತ್ತದೆ. ಹಲ್ಲಿನ ಆರೋಗ್ಯವನ್ನು ಕಾಪಾಡಿಕೊಳ್ಳಬೇಕಾಗಿರುವುದು ಹಲ್ಲು ಬೆಳ್ಳಗೆ ಚೆನ್ನಾಗಿ ಕಾಣಬೇಕೆಂಬ ಕಾರಣಕ್ಕೆ ಮಾತ್ರವಲ್ಲ, ಆರೋಗ್ಯದ ದೃಷ್ಟಿಯಿಂದಲೂ ಉತ್ತಮವಾಗಿದೆ. ಬಾಯಿಯ ಆರೋಗ್ಯ ರಕ್ಷಣೆಯನ್ನು ಅಭ್ಯಾಸ ಮಾಡುವುದರಿಂದ ದೇಹದ ನೈಸರ್ಗಿಕ ರಕ್ಷಣೆಯು ಬ್ಯಾಕ್ಟೀರಿಯಾವನ್ನು ನಿಯಂತ್ರಣದಲ್ಲಿಡಲು ಅನುವು ಮಾಡಿಕೊಡುತ್ತದೆ ಎಂದರು.

ಈವೇಳೆ ಮುಖ್ಯ ಶಿಕ್ಷಕ ಬಿ.ವಿ. ದೇಸಾಯಿಪಟ್ಟಿ, ಶಿಕ್ಷಕ ಸಂಘದ ಪ್ರಧಾನ ಕಾರ್ಯದರ್ಶಿ ಸಿ.ಕೆ. ಕೇಸರಿ, ಸಿಎಚ್‌ಓ ಸಂತೋಷ ರಾಥೋಡ್, ಆಶಾ ಕಾರ್ಯಕರ್ತೆ ವಿಜಯಲಕ್ಷ್ಮೀ ಧಡೇಸೂರಮಠ, ಐಶ್ವರ್ಯ ಬಿಂಗಿ, ದೀಪಾ ಮಾದರ, ಕಾವ್ಯಾ ಎಸ್ ಸೇರಿದಂತೆ ವಿದ್ಯಾರ್ಥಿಗಳು ಇದ್ದರು.

### ಕೈ ಕೈ ಹಿಡಿದು ಒಗ್ಗಟ್ಟು ಪ್ರದರ್ಶಿಸಿದ ಸಿಎಂ, ಡಿಸಿಎಂ

# ಬಂಡೆ ರೀತಿ ನಮ್ಮ ಸರಕಾರ ಭದ್ರ




■ **ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

"ಸರ್ಕಾರ ಬಿದ್ದೋಗುತ್ತೆ ಅಂತ ಸೋತ ಗಿರಾಕಿಗಳು ಹೇಳುತ್ತಿದ್ದಾರೆ. ಆದರೆ, ನಮ್ಮ ಸರ್ಕಾರ ಐದು ವರ್ಷ ಬಂಡೆ ರೀತಿ ಭದ್ರವಾಗಿರುತ್ತೆ. 2028ರಲ್ಲೂ ನಾವೇ ಗೆದ್ದು ಅಧಿಕಾರಕ್ಕೆ ಬರ್ತೀವಿ" ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಕೃಷ್ಣರಾಜಸಾಗರ ಜಲಾಶಯಕ್ಕೆ ಬಾಗಿನ ಅರ್ಪಿಸಿದ ಬಳಿಕ ವೇದಿಕೆ ಕಾರ್ಯಕ್ರಮದಲ್ಲಿ ಮಾತನಾಡಿದ ಸಿಎಂ, "ನೀರಾವರಿಗೆ ನಮ್ಮ ಈ ಸರ್ಕಾರ 25 ಸಾವಿರ ಕೋಟಿ ರೂಪಾಯಿ ಕೊಟ್ಟಿದೆ. ಬೇರೆ ಯಾವ ಸರ್ಕಾರವಾದರೂ ಈ ಮಟ್ಟದ ಅನುದಾನ ಕೊಟ್ಟಿತ್ತಾ? ಎಂದು ಪ್ರಶ್ನಿಸಿದರು.

ಸೋತ ಗಿರಾಕಿಗಳು ಸರ್ಕಾರ ಬಿದ್ದೋಗುತ್ತೆ ಎಂದು ಸುಳ್ಳು ಹೇಳಿಕೊಂಡು ತಿರುಗುತ್ತಿದ್ದಾರೆ. ನನಗೂ ಡಿಸಿಎಂ ಡಿ.ಕೆ ಶಿವಕುಮಾರ್ ಅವರಿಗೂ ಸರಿ ಇಲ್ಲ ಎಂದು ಬುರುಡೆ ಬಿಡುತ್ತಿದ್ದಾರೆ. ನಾನು ಮತ್ತು ಶಿವಕುಮಾರ್ ಇಬ್ಬರೂ ಒಟ್ಟಾಗಿ, ಗಟ್ಟಿಯಾಗಿದ್ದೀವಿ. ನಮ್ಮ ಸರ್ಕಾರವೂ ಐದು ವರ್ಷ ಗ್ಯಾರಂಟಿಯಾಗಿ ಗಟ್ಟಿಯಾಗಿ ಇರುತ್ತದೆ. 2028 ರಲ್ಲೂ ಗೆದ್ದು ಮತ್ತೆ ಅಧಿಕಾರಕ್ಕೆ ಬರುತ್ತೇವೆ ಎಂದು ಹೇಳಿದರು.

### ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದ ಪ್ರತಿಭಾ ಪುರಸ್ಕಾರ ಮಾಲಿಕೆ-1

# ಸರ್ಕಾರಿ ಶಾಲೆಗಳಿಂದ ಗುಣಮಟ್ಟದ ಶಿಕ್ಷಣ

■ **ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರಿ ಶಾಲೆಗಳಲ್ಲಿ ಇಂದು ಗುಣಮಟ್ಟದ ಶಿಕ್ಷಣದೊಂದಿಗೆ ವಿದ್ಯಾರ್ಥಿಗಳಿಗೆ ಹಲವಾರು ಸೌಲಭ್ಯಗಳಿದ್ದು, ಅವುಗಳನ್ನು ಸದ್ಬಳಕೆ ಮಾಡಿಕೊಂಡು ವಿದ್ಯಾರ್ಥಿಗಳು ತಮ್ಮುತ್ತಮ ಭವಿಷ್ಯವನ್ನು ರೂಪಿಸಿಕೊಳ್ಳಬೇಕು ಎಂದು ಡಾ. ಪ್ರಕಾಶ ಗುಂಡೂರ ಹೇಳಿದರು.

ಅವರು ಸೋಮವಾರ ಗದಗ ತಾಲೂಕಿನ ಮುಳಗುಂದ ಪಟ್ಟಣದ ಸರ್ಕಾರಿ ಪ್ರೌಢಶಾಲೆಯ (ಆರ್.ಎಂ.ಎಸ್.ಎ) ಶಾಲೆಯ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಮೊದಲ 5 ಸ್ಥಾನಗಳನ್ನು ಪಡೆದುಕೊಂಡ ವಿದ್ಯಾರ್ಥಿಗಳಿಗೆ ಶ್ರೀ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದ ಪ್ರತಿಭಾ ಪುರಸ್ಕಾರ ನೀಡಿ ಮಾತನಾಡಿದರು.

ವಿದ್ಯಾರ್ಥಿಗಳು ತಮ್ಮ ಕಲಿಕೆಯ ದಿನಗಳಲ್ಲಿ ಕಲಿಯುವದನ್ನು ಮಾತ್ರ ಮಾಡಬೇಕು. ಶ್ರದ್ಧೆ ಮತ್ತು



ನಿಷ್ಠೆಯಿಂದ ಅಭ್ಯಾಸ ಮಾಡಿದಲ್ಲಿ ಉತ್ತಮ ಫಲಿತಾಂಶ ಕಂಡುಕೊಳ್ಳಲು ಸಾಧ್ಯವಿದೆ. ಇಂದು ಇಲ್ಲಿ ಪ್ರತಿಭಾ ಪುರಸ್ಕಾರ ಪಡೆದವರು ಬರಲಿರುವ ದಿನಗಳಲ್ಲಿ ತಾವೂ ಈ ರೀತಿಯ ಪ್ರತಿಭಾ ಪುರಸ್ಕಾರ ನೀಡುವಂತಾಗಲಿ ಎಂದರು. ಪ್ರತಿಭಾ ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರಗೌಡ ಪಾಟೀಲ ಅವರು ಪ್ರತಿಷ್ಠಾನ ಧ್ಯೇಯೋದ್ದೇಶಗಳನ್ನು ವಿವರಿಸಿ ವಿದ್ಯಾರ್ಥಿಗಳು ಪ್ರತಿಷ್ಠಾನದ ಲಾಭವನ್ನು ಪಡೆದುಕೊಳ್ಳಬೇಕು ಎಂದರು.

ಸಮಾರಂಭದ ಅಧ್ಯಕ್ಷತೆಯನ್ನು ಎಸ್.ಎಚ್. ಪೂಜಾರ ವಹಿಸಿದ್ದರು. ವೇದಿಕೆಯ ಮೇಲೆ ಪ್ರತಿಷ್ಠಾನದ ಪದಾಧಿಕಾರಿಗಳಾದ ಶಿವಾನಂದ ಕತ್ತಿ, ಸುಭಾಸ ಬೆಟದೂರ, ಎಸ್.ಜಿ. ಫಿರಂಗಿ, ನೇಹಾ, ಸುಧಾರಾಣಿ, ವೀರೇಶ ಗಂಜಿ ಉಪಸ್ಥಿತರಿದ್ದರು.

ವಿದ್ಯಾರ್ಥಿಗಳಾದ ರೇಣುಕಾ ಕಮ್ಮಾರ, ಹರೀಶ ಕೆಂಚನಾಯ್ಕರ್, ಇಕ್ಬಾಲ್ ಯಳವತ್ತಿ, ದೀಪಾ ಇಡಗುರಿ, ರಜಿಯಾ ಮುಂದಿನಮನಿ ಇವರಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ಎಸ್.ವ್ಹಿ. ತಿಮ್ಮಾಪೂರ ಸ್ವಾಗತಿಸಿ ಪರಿಚಯಿಸಿದರು. ಜಿ.ಐ. ಪಾಟೀಲ ನಿರೂಪಿಸಿದರು. ವ್ಹಿ.ಟಿ. ಅಂಗಡಿ ವಂದಿಸಿದರು.

**ಉರ್ದು ಪ್ರೌಢಶಾಲೆ:** ಮುಳಗುಂದ ಪಟ್ಟಣದ ಅಂಜುಮನ್ ಇ-ಇಸ್ಲಾಂ ಸರ್ಕಾರಿ ಉರ್ದು ಪ್ರೌಢಶಾಲೆಯ ವಿದ್ಯಾರ್ಥಿಗಳಾದ ಶಫಾ ಲಾಡಸಾಬನವರ, ಮೆಹಬೂಬೀ ಶೇಖ, ಬೀಬಿಫಾತೀಮಾ ಕರ್ನಾಚಿ, ತೇಹರಿನ್ ಅಜಂಖಾನವರ, ಸೀಮಾ ಮುಲ್ಲಾ ಅವರಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು. ಅಧ್ಯಕ್ಷತೆಯನ್ನು ಡಾ. ಅಂಜನಾ ತಳಗೇರಿ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಎಸ್‌ಡಿಎಂಸಿ ಅಧ್ಯಕ್ಷ ಹಮೀದ್ ಮುಜಾವರ ಆಗಮಿಸಿದ್ದರು. ವೇದಿಕೆಯ ಮೇಲೆ ಪ್ರತಿಷ್ಠಾನದ ಪದಾಧಿಕಾರಿಗಳಾದ ಶಿವಕುಮಾರ ಪಾಟೀಲ, ಶಿವಾನಂದ ಕತ್ತಿ, ಸುಭಾಸ ಬೆಟದೂರ, ಜಿ.ಎಂ. ಫಿರಂಗಿ, ನೇಹಾ ಉಪಸ್ಥಿತರಿದ್ದರು.

**ಮೊರಾರ್ಜಿ ವಸತಿ ಶಾಲೆ:** ಮುಳಗುಂದದ ಮೊರಾರ್ಜಿ ವಸತಿ ಶಾಲೆಯ ವಿದ್ಯಾರ್ಥಿಗಳಾದ ಯುಕ್ತಾ ಪಾಟೀಲ, ಉಮೇಶ ಭೂಮಣ್ಣವರ, ಕಾವ್ಯ ಕಾರಬಾರಿ, ರೇಖಾ ಲಮಾಣಿ, ಪುಷ್ಪಾ ದೊಡ್ಡಮನಿ ಅವರಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು.

ಅಧ್ಯಕ್ಷತೆಯನ್ನು ಜಿ.ಎಂ. ಪಿಡ್ಡನಗೌಡ್ರ ವಹಿಸಿದ್ದರು. ಎಸ್.ಜಿ. ಸತಾರ, ಅಕ್ಷತಾ ಉಪ್ಪಾರ ಸೇರಿದಂತೆ ಪ್ರತಿಷ್ಠಾನದ ಪದಾಧಿಕಾರಿಗಳು ಉಪಸ್ಥಿತರಿದ್ದರು.

> **ಕಣವಿ ಗ್ರಾಮದಲ್ಲಿ**
>
> ಕಣವಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳಾದ ಕುಮಾರ ಬೋಳನವರ, ಲಕ್ಷ್ಮೀ ಗಾರವಾಡ, ರಂಜಿತಾ ಕಣವಿ, ಸುನೀತಾ ತೋಳನವರ, ಅಶ್ವಿನಿ ರಣತೂರ ಅವರಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು.
>
> ಮುಖ್ಯ ಅತಿಥಿಗಳಾಗಿ ಶ್ರೀಕಾಂತಗೌಡ್ರ ಪಾಟೀಲ, ಮುತ್ತು ವೆಂಕಟಾಪೂರ, ಆರ್.ಎಸ್. ತೋಳನವರ, ಎಂ.ಎಚ್. ಗಳೇದ ಆಗಮಿಸಿದ್ದರು. ಅಧ್ಯಕ್ಷತೆಯನ್ನು ಎಸ್.ಐ. ಬಡಿಗೇರ ವಹಿಸಿದ್ದರು. ಸಮಾರಂಭದಲ್ಲಿ ಜಿ.ಎನ್. ಮುದ್ದಿಕೋಲ, ಎಸ್.ಜಿ. ಮೂಲಿಮನಿ ಸೇರಿದಂತೆ ಪ್ರತಿಷ್ಠಾನದ ಪದಾಧಿಕಾರಿಗಳು ಉಪಸ್ಥಿತರಿದ್ದರು. ಎಸ್.ಜಿ. ಮೂಲಿಮನಿ ಸ್ವಾಗತಿಸಿದರು, ಕಳಕಪ್ಪ ಕುರ್ತಕೋಟಿ ಪ್ರಾಸ್ತಾವಿಕವಾಗಿ ಮಾತನಾಡಿ ವಂದಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka